**ಕರ್ನಾಟಕ ಸರ್ಕಾರ**

**ತಹಶೀಲ್ದಾರ್‌ರವರ ಕಾರ್ಯಾಲಯ**

**ಚಿಕ್ಕಬಳ್ಳಾಪುರ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.**

ನಂ. ಮಾಹಿತಿ ಹಕ್ಕು/112/17-18. ದಿನಾಂಕ : 22-01-2018.

## ಅಧಿಸೂಚನೆ

ವಿಷಯ :- ಭಾರತ ಸರ್ಕಾರದ ಮಾಹಿತಿ ಪಡೆಯಲು ಹಕ್ಕು ಅಧಿನಿಯಮ 2005 ರ ಪ್ರಕರಣ ಕಲಂ. 4(1) (ಬಿ) ಅನುಸಾರ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಕಛೇರಿಯ ಮಾಹಿತಿಯನ್ನು ಪ್ರಕಟಿಸುವ ಬಗ್ಗೆ.

ಭಾರತ ಸರ್ಕಾರವು ಜಾರಿಗೆ ತಂದಿರುವ 2005 ರ ಮಾಹಿತಿ ಹಕ್ಕು ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಹಕ್ಕು ಅಧಿನಿಯಮ 2005 ರ ಸೆಕ್ಷನ್ 5(1) 5(2) ಮತ್ತು 19(1) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಂದಾಯ ಇಲಾಖೆಗೆ ಸೇರಿದ ತಾಲ್ಲೂಕು ಕಛೇರಿ ವ್ಯಾಪ್ತಿಯ ಮಾಹಿತಿಯನ್ನು ಮೇಲಿನ ಕಾಯ್ದೆಯನ್ವಯ ಒದಗಿಸಲು ಮಾಹಿತಿ ಕೋರಿರುವ ಅರ್ಜಿಗಳ ಅಥವಾ ಮೇಲ್ಮನವಿಗಳನ್ನು ಸ್ವೀಕರಿಸಲು ಅನುಕ್ರಮವಾಗಿ " ಸಾರ್ವಜನಿಕ ಮಾಹಿತಿ ಅಧಿಕಾರಿ " ಮತ್ತು " ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ" ಹಾಗೂ " ಮೇಲ್ಮನವಿ ಪ್ರಾಧಿಕಾರಿಗಳನ್ನಾಗಿ" ಈ ಕೆಳಕಂಡಂತೆ ಸರ್ಕಾರದಿಂದ ನೇಮಿಸಲಾಗಿದೆ. (ಸರ್ಕಾರದ ಅಧಿಸೂಚನೆ ನಂ.ಕಂಇ/37/ವಿಮಕ/2005. ದಿನಾಂಕ : 12-08-2005)

| ಕ್ರಮ ಸಂಖ್ಯೆ | ಇಲಾಖೆಯ ಹೆಸರು | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005 ರ ಸೆಕ್ಷನ್ 5(1) ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005 ರ ಸೆಕ್ಷನ್ 5(2) ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005 ರ ಸೆಕ್ಷನ್ 19(1) ರ ಪ್ರಕಾರ ಮೇಲ್ಮನವಿ ಪ್ರಾಧಿಕಾರ |
|---|---|---|---|---|
| 1 | ತಹಸೀಲ್ದಾರ್ ಹಾಗೂ ತಾಲ್ಲೂಕು ದಂಡಾಧಿಕಾರಿಗಳ ಕಛೇರಿ | ತಹಸೀಲ್ದಾರ್ | ಶಿರಸ್ತೇದಾರರು (ವಿಷಯವಾರು) | ಉಪವಿಭಾಗಾಧಿಕಾರಿಗಳು, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ. |
| 2 | ನಾಡ ಕಛೇರಿ (ಸಂಬಂಧಪಟ್ಟ ಹೋಬಳಿ) | ರಾಜಸ್ವ ನಿರೀಕ್ಷಕರು (ಸಂಬಂಧಪಟ್ಟ ಹೋಬಳಿ/ ವೃತ್ತ) | ಗ್ರಾಮ ಲೆಕ್ಕಾಧಿಕಾರಿ (ಸಂಬಂಧಪಟ್ಟ ವೃತ್ತ) | ಉಪ ತಹಸೀಲ್ದಾರ್ (ಸಂಬಂಧಪಟ್ಟ ಹೋಬಳಿ) |

ಮಾಹಿತಿ ಹಕ್ಕು ಅಧಿನಿಯಮ – 2005

ಕೇಂದ್ರ ಸರ್ಕಾರವು ಜಾರಿಗೆ ತಂದಿರುವ 2005 ರ ಮಾಹಿತಿ ಹಕ್ಕು ಕಾಯಿದೆ ಇದಾಗಿದ್ದು, ಸದರಿ ಕಾಯಿದೆಯ ಕಲಂ 4(1) ರಡಿ ಒಟ್ಟು 17 ವಿವಿಧ ಅಂಶಗಳನ್ನೊಳಗೊಂಡ ಒಂದು ಕೈಪಿಡಿ ತಯಾರಿಸಬೇಕಾಗಿದ್ದು, ಈ ಪ್ರಾಧಿಕಾರದ ವ್ಯಾಪ್ತಿಗೆ ಬರುವ ಘಟಕಗಳ ಕಾರ್ಯಚಟುವಟಿಕೆಗಳ ಮಾಹಿತಿ ಈ ಕೆಳಕಂಡಂತಿರುತ್ತದೆ.

**(1) ತಾಲ್ಲೂಕು ಘಟಕದ ಸಂರಚನೆ ಪ್ರಕಾರ್ಯಗಳು ಮತ್ತು ಕರ್ತವ್ಯದ ವಿವರಗಳು :-**

**(2) (ಅ) ಚಿಕ್ಕಬಳ್ಳಾಪುರ ತಾಲ್ಲೂಕಿನ ಸಾಮಾನ್ಯ ಮಾಹಿತಿ :-**

| | | | | | |
|---|---|---|---|---|---|
| 1 | ಭೌಗೋಳಿಕ ವಿಸ್ತೀರ್ಣ | 4244 ಚದರ ಕಿ.ಮೀ | 4 | 1) ರಾಷ್ಟ್ರೀಯ ಹೆದ್ದಾರಿ (ಕಿ.ಮೀ) | - |
| 2 | ಒಟ್ಟು ಜನ (2010 ರ ಜನಗಣತಿ) | 1255104 | 5 | ರಾಜ್ಯ ಹೆದ್ದಾರಿ | 58.10 ಕಿ.ಮೀ |
| | 1)ಗ್ರಾಮೀಣ ಜನ ಸಂಖ್ಯೆ | 973985 | 6 | ಜಿಲ್ಲಾ ಮುಖ್ಯ ರಸ್ತೆ | 120.7 ಕಿ.ಮೀ |
| | 2) ನಗರ ಪ್ರದೇಶದ ಜನ ಸಂಖ್ಯೆ | 212536 | 7 | ರೈಲು ಮಾರ್ಗ | - |
| | 1) ಗಂಡಸರು | 148884 | 7 ಎ | ಅಂಗನವಾಡಿ ಕೇಂದ್ರಗಳು | 1938 |
| | 2) ಹೆಂಗಸರು | 63652 | 8 | 1) ವೃದ್ಧಾಪ್ಯ ವೇತನ ಪಡೆಯುತ್ತಿರುವವರು | 2315 |
| | 3) ಪರಿಶಿಷ್ಟ ಜಾತಿ | 312565 | | 2) ಅಂಗವಿಕಲ ಮಾಸಾಶನ ಪಡೆಯುತ್ತಿರುವವರು | 3199 |
| | 4) ಪರಿಶಿಷ್ಟ ಪಂಗಡ | 156487 | | 3) ವಿಧವೆ ಪಿಂಚಣಿದಾರರು<br>4) ಸಂಧ್ಯಾ ಸುರಕ್ಷಾ ಯೋಜನೆ<br>5) ಮನಸ್ವಿನಿ<br>6) ಮೈತ್ರಿ<br>7) ಎಫ್.ಡಬ್ಲ್ಯೂ.ಪಿ | 6020<br>15572<br>986<br>29<br>03 |
| | 5) ಲಿಂಗ ಪ್ರಮಾಣ | 972 | 9 | ತಾಲ್ಲೂಕುಗಳು | 1 |
| | 6) ಜನ ಸಾಂದ್ರತೆ (2010 ರ ಜನಗಣತಿ ಪ್ರಕಾರ) | 295ಚ.ಕಿ.ಮೀ | 10 | ಹೋಬಳಿಗಳು | 3 |
| 3 | 7) ವ್ಯವಸಾಯಗಾರರು | 226356 | 11 | ಜನ ವಸತಿ ಇರುವ ಗ್ರಾಮಗಳು ( 2011 ರ ಜನ ಗಣತಿ ಪ್ರಕಾರ) | 222 |
| | 1) ವ್ಯವಸಾಯ ಕೂಲಿಕಾರರು | 639778 | 12 | ಗ್ರಾಮ ಪಂಚಾಯಿತಿಗಳು | 23 |
| 4 | 1) ಒಟ್ಟು ಸಾಕ್ಷರತೆ ಪ್ರಮಾಣ | 69.76 | 13 | 1) ವಾಣಿಜ್ಯ ಬ್ಯಾಂಕು ಶಾಖೆ | - |
| | 1) ಹೆಂಗಸರ ಸಾಕ್ಷರತೆ ಪ್ರಮಾಣ<br>2) ಗಂಡಸರ ಸಾಕ್ಷರತೆ ಪ್ರಮಾಣ | 66.25<br>81.01 | | 3) ಗ್ರಾಮೀಣ ಬ್ಯಾಂಕು ಶಾಖೆ<br>4) ಸಹಕಾರ ಬ್ಯಾಂಕುಗಳ ಶಾಖೆಗಳು<br>5) ಇತರೆ ಸಹಕಾರ ಬ್ಯಾಂಕುಗಳು<br>6) ಪಿ.ಎಲ್.ಡಿ. ಬ್ಯಾಂಕ್ | 5<br>15<br>1<br>1 |
| 5 | 1) ಮಳೆ - ವಾಡಿಕೆ ಮಿ.ಮೀ. | ಮೀ.ಮೀ | | | |
| | 2) ಮಳೆ ವಾಸ್ತಾವಿಕ 2005 ಮಿ.ಮೀ<br>2017 | 837.00ಮಿ.ಮೀ<br>750.02ಮಿ.ಮೀ | | | |

ಮಾಹಿತಿ ಹಕ್ಕು ಅಧಿನಿಯಮ - 2005

**(ಇ) ಕಾರ್ಯ ವಿಧಾನ.**

**ಕಂದಾಯ ಇಲಾಖೆಯು ಕೆಳಕಂಡ ಸಾಮಾನ್ಯ ಕಾರ್ಯಗಳನ್ನು ಪ್ರಮುಖವಾಗಿ ನಿರ್ವಹಿಸುತ್ತದೆ.**

1. ಕಾರ್ಯಕಾರಿ ದಂಡಾಧಿಕಾರಿಯ ಕಾರ್ಯ ನಿರ್ವಹಣೆ.
2. ಸರ್ಕಾರಕ್ಕೆ ಸಂಬಂಧಿಸಿದ ಎಲ್ಲಾ ರೀತಿಯ ಸಾರ್ವಜನಿಕ ದೂರು ನಿರ್ವಹಣೆ.
3. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಸಾರ್ವಜನಿಕ ವಿರತಣಾ ವ್ಯವಸ್ಥೆಯ ನಿರ್ವಹಣೆ
4. ಎಲ್ಲಾ ರಿತೀಯ ಚುನಾವಣೆಗಳನ್ನು ನಡೆಸುವುದು.
5. ಎಲ್ಲಾ ರೀತಿಯ ಗಣತಿ ಕಾರ್ಯವನ್ನು ನಡೆಸುವುದು ( ಜನಗಣತಿ, ಜಾನುವಾರು ಗಣತಿ, ಕೃಷಿ ಗಣತಿ, ಆರ್ಥಿಕ ಗಣತಿ)
6. ಎಲ್ಲಾ ಔಪಚಾರಿಕ ಸಮಾರಂಭಗಳಲ್ಲಿ ರಾಜ್ಯದ ಪರವಾಗಿ ಶಿಷ್ಟಾಚಾರ ಕಾರ್ಯ ನಿರ್ವಹಿಸುವುದು.
7. ಪ್ರಕೃತಿ ವಿಕೋಪ ನಿರ್ವಹಣೆ, ನೈಸರ್ಗಿಕ ಮತ್ತು ಮಾನವ ನಿರ್ಮಿತ ವಿಕೋಪಗಳಿಂದ ಬಾಧಿತರಾದವರಿಗೆ ಪರಿಹಾರ, ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾರ್ಯ ನಿರ್ವಹಣೆ
8. ವೃದ್ಧಾಪ್ಯ ವೇತನ ಮತ್ತಿತರ ಸಾಮಾಜಿಕ ಸುರಕ್ಷತೆಯನ್ನು ನಿರ್ವಹಿಸುವುದು.
9. ಆಯುಧ ಕಾಯಿದೆಯಡಿ ಪ್ರಕರಣ ವಿಲೇವಾರಿ.
10. ಆದಾಯ, ಜಾತಿ, ನಿವಾಸ, ರಾಷ್ಟ್ರೀಯತೆ, ಅಲ್ಪ ಸಂಖ್ಯಾತರ ಸ್ಥಾನಮಾನಗಳ ಬಗ್ಗೆ ಪ್ರಮಾಣ ಪತ್ರ ನೀಡುವುದು
11. ಪೌರಾಡಳಿತ.
12. ನ್ಯಾಯಾಲಯಗಳಲ್ಲಿ ಸರ್ಕಾರಿ ವ್ಯಾಜ್ಯ ನಿರ್ವಹಣೆ.
13. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಮತ್ತು ಕಾರ್ಯಕ್ರಮಗಳ, ಸಮನ್ವಯ ಹಾಗೂ ಪರಿವೀಕ್ಷಣಾ ಕಾರ್ಯ ನಿರ್ವಹಣೆ.

14) ಸರ್ಕಾರ ಕಾಲ ಕಾಲಕ್ಕೆ ಜಾರಿಗೆ ತರುವ ಯೋಜನೆಗಳ ನಿರ್ವಹಣೆ, ಪ್ರತಿಕಾ ಕಾಯದೆರಡಿ ನಿರ್ವಹಣೆ
15) ಮನರಂಜನಾ ಕಾಯ್ದೆಯಡಿ ನಿರ್ವಹಣೆ.

**(ಈ) ಕಂದಾಯ ಆಡಳಿತ :–**

ಆದಾಗ್ಯೂ ಕಂದಾಯ ಮತ್ತಿತರ ಕಾನೂನುಗಳಲ್ಲಿ ಸಾಂಪ್ರದಾಯಕವಾಗಿ ಕಂದಾಯ ಇಲಾಖೆಗೆ ವಹಿಸಲಾಗಿರುವ ಪ್ರಮುಖ ಕಾರ್ಯಗಳು ಕೆಳಕಂಡಂತಿವೆ.

1. ರಾಜ್ಯದಲ್ಲಿನ ಭೂ ದಾಖಲೆಗಳ ನಿರ್ವಹಣೆ ಮತ್ತು ಎಲ್ಲಾ ಜಮೀನುಗಳ ಭೂಮಾಪನ.
2. ಸರಕಾರಿ ಬಾಕಿ ವಸೂಲಾತಿ ಭೂ ಕಂದಾಯ, ನೀರು ತೆರಿಗೆ, ಮತ್ತಿತರ ಸರ್ಕಾರಿ ಬಾಕಿ, ಉಪಕರ ಮತ್ತು ತೆರಿಗೆಗಳ ವಸೂಲಾತಿ.
3. ಗೋಮಾಳ, ಕೆರೆ ಅಂಗಳ, ಉಪ ವನಗಳು ಇತ್ಯಾದಿ ಸಾಮುದಾಯಿಕ ಜಮೀನುಗಳು ನಿರ್ದಿಷ್ಟ ಉದ್ದೇಶಕ್ಕಾಗಿ ಕಾದಿರಿಸಿದ ಜಮೀನುಗಳು ಸೇರಿದಂತೆ ಎಲ್ಲಾ ಸರ್ಕಾರಿ ಜಮೀನುಗಳ ನಿರ್ವಹಣೆ.
4. ಭೂ ಮಂಜೂರಾತಿ
5. ಭೂ ಸುಧಾರಣೆ ಮತ್ತು ಗೇಣಿದಾರಿಕೆಯ ನಿಬಂಧನೆಗಳ ನಿರ್ವಹಣೆ.
6. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಜಮೀನು ವಿಚಾರ.
7. ಭೂ ಪರಿವರ್ತನೆ ಮತ್ತು ಸರಿಯಾದ ರೀತಿಯಲ್ಲಿ ಬಡಾವಣೆಗಳ ಅಭಿವೃದ್ಧಿ.
8. ಕರ್ನಾಟಕ ಭೂ ಕಂದಾಯ ಕಾಯ್ದೆಯಡಿ ಬರುವ ಎಲ್ಲಾ ವ್ಯವಹಾರಗಳ ನಿರ್ವಹಣೆ.

ಮಾಹಿತಿ ಹಕ್ಕು ಅಧಿನಿಯಮ – 2005

**(ಉ) ಕಾನೂನು ಆಡಳಿತ :–**

**ತಹಸೀಲ್ದಾರರು ಹೊಂದಿರುವ ಅಧಿಕಾರದ ಕೇಂದ್ರ ಹಾಗೂ ರಾಜ್ಯ ಮಟ್ಟದ ಮುಖ್ಯ ಕಾಯ್ದೆಗಳ ಮತ್ತು ಕಾನೂನುಗಳ ವಿವರ :–**

| | |
|---|---|
| 1 | ಕರ್ನಾಟಕ ನೀರಾವರಿ ಆಕ್ಟ್, 1965 |
| 2 | ಕರ್ನಾಟಕ ರೆಂಟ್ ಆಕ್ಟ್, 1999 ಹಾಗೂ ನಿಯಮ 2001 |
| 3 | ಕರ್ನಾಟಕ ಭೂ ಕಂದಾಯ ನಿಯಮ, 1964 |
| 4 | ಕರ್ನಾಟಕ ಭೂ ಕಂದಾಯ ಕಾಯ್ದೆ, 1961 |
| 5 | ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969 |
| 6 | ಕರ್ನಾಟಕ ಮುನಿಸಿಪಾಲಿಟಿ ಆಕ್ಟ್, 1964 |
| 7 | ನ್ಯಾಷನಲ್ ಡಿಸಾಸ್ಟರ್ ಮ್ಯಾನೇಜ್‌ಮೆಂಟ್ |
| 8 | ಕರ್ನಾಟಕ ಇನಾಮ್ಸ್ ಅಂಡ್ ಸರ್ಟೈನ್ ಅಬಾಲಿಷನ್ ಆಕ್ಟ್ |
| 9 | ಕರ್ನಾಟಕ ಲ್ಯಾಂಡ್ ಅಕ್ವಿಜಿಷನ್ ಆಕ್ಟ್, 1864 |
| 10 | ಕರ್ನಾಟಕ ಸಿವಿಲ್ ಸರ್ವೀಸ್ (ಸಿಸಿಎ) ರೂಲ್ಸ್ 1957 |
| 11 | ಕರ್ನಾಟಕ ಹಿಂದೂ ರಿಲಿಜಿಯಸ್ ಇನ್‌ಸ್ಟಿಟ್ಯೂಷನ್ ಮತ್ತು ಎಂಡೋಮೆಂಟ್ ಆಕ್ಟ್ 1957 |
| 12 | ಭಾರತೀಯ ದಂಡ ಸಂಹಿತೆ. |
| 13 | ಕರ್ನಾಟಕ ಪೋಲೀಸ್ ಅಧಿನಿಯಮ |
| 14 | ಕ್ರಿಮಿನಲ್ ಪ್ರೊಸೀಜರ್ ಕೋಡ್ |
| 15 | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಂಡಗಳ ( ಕೆಲವು ಜಮೀನುಗಳ ಪರಭಾರೆ ನಿಷೇಧ) ಕಾಯ್ದೆ 1978 |
| 16 | ಕರ್ನಾಟಕ ಗ್ರಾಮ ನೌಕರಿಗಳ ರದ್ಧತಿ ಅಧಿನಿಯಮ 1961 |
| 17 | ಪರಿಶಿಷ್ಟ ಜಾತಿ ಪ್ರಾತಿನಿಧ್ಯ ಅಧಿನಿಯಮ 1950 ಮತ್ತು 1951 |
| 18 | ಮತದಾರರ ನೋಂದಣಿ ನಿಯಾಮಾವಳಿ 1961 |
| 19 | ಬಾರತೀಯ ಮುದ್ರಾಂಕ ಕಾಯ್ದೆ 1899 |
| 20 | ರೆವಿನ್ಯೂ ರಿಕವರಿ ಆಕ್ಟ್ (1 ಓಫ್ 1890) |
| 21 | ಅವಶ್ಯಕ ವಸ್ತುಗಳ ಕಾಯ್ದೆ 1955 |
| 22 | ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ಮತ್ತು ನಿಯಾಮಾವಳಿ 1974 |
| 23 | ಕರ್ನಾಟಕ ಹಲವು ಇನಾಂ ರದ್ಧತಿ ಅಧಿನಿಯಮ 1977 |
| 24 | ಕರ್ನಾಟಕ ಗ್ರಾಮ ನೌಕರಿಗಳ ರದ್ಧತಿ ಅಧಿನಿಯಮ 1961 |
| 25 | ಕರ್ನಾಟಕ ಪುರಸಭೆಗಳ ಅಧಿನಿಯಮ 1964 |
| 26 | ಕರ್ನಾಟಕ ಕೃಷಿ ಸಾಲ ಕಾರ್ಯಾಚರಣೆ ಮತ್ತು ಇತರೆ ಉಪ ಬಂಧಗಳ ಅಧಿನಿಯಮ 1974 ಮತ್ತು ನಿಯಾಮವಳಿ 1975 |
| 27 | ಕರ್ನಾಟಕ ವೃದ್ಧಾಪ್ಯ ವೇತನ ನಿಯಮಾವಳಿ |
| 28 | ನಿರ್ಗತಿಕ ವಿಧವಾ ವೇತನ ನಿಯಾಮಾವಳಿ |
| 29 | ದೈಹಿಕ ಅಂಗವಿಕಲರಿಗೆ ನಿರ್ವಹಣಾ ಭತ್ಯೆ ಮಂಜೂರಿ ನಿಯಾಮಾವಳಿ |
| 30 | ಕರ್ನಾಟಕ ಋಣ ವಿಮೋಚನಾ ಅಧಿನಿಯಮ |
| 31 | ಮತದಾರರ ನೋಂದಣಿ ಅಧಿನಿಯಮ |
| 32 | ಕರ್ನಾಟಕ ಕೃಷಿ ಉತ್ಪನ್ನ ಮರುಕಟ್ಟೆ ( ನಿಯಂತ್ರಣಾ) ಅಧಿನಿಯಮ 1966 |
| 33 | ಕರ್ನಾಟಕ ನೀರಾವರಿ ಅಧಿನಿಯಮ 1965 |
| 34 | ಕರ್ನಾಟಕ ನೀರಾವರಿ (ನೀರಿನ ಕರ ಆಕರಣೆ) ನಿಯಾಮಾವಳಿ 1965 |
| 35 | ಕರ್ನಾಟಕ ಅರಣ್ಯ ನಿಯಮವಳಿ 1969 |
| 36 | ಕರ್ನಾಟಕ ಜಾನುವಾರು ಅತಿಕ್ರಮ ಪ್ರವೇಶ ಅಧಿನಿಯಮ 1966 |
| 37 | ಏಲಕ್ಕಿ ಅಧಿನಿಯಮ 1965 |
| 38 | ಕರ್ನಾಟಕ ಸಾರ್ವಜನಿಕ ಆವರಣಗಳ ಅಧಿನಿಯಮ 1974 ಮತ್ತು ಅದರಡಿ ನಿಯಾಮವಳಿ |

ಮಾಹಿತಿ ಹಕ್ಕು ಅಧಿನಿಯಮ – 2005

**2. ತಾಲ್ಲೂಕು ಘಟಕದ ಅಧಿಕಾರಿಗಳ ಮತ್ತು ನೌಕರರ ಅಧಿಕಾರಗಳು ಮತ್ತು ಕರ್ತವ್ಯದ ವಿವರಗಳು :-**



**ದಂಡಾಧಿಕಾರಿಯಾಗಿ ತಹಸೀಲ್ದಾರ್‌ರವರು ಈ ಕೆಳಗಿನ ಕಾಯ್ದೆಗಳಡಿಯಲ್ಲಿ ಅಧಿಕಾರ ಹಾಗೂ ಕರ್ತವ್ಯಗಳನ್ನು ಹೊಂದಿರುತ್ತಾರೆ.**

1. ದಂಡ ಪ್ರಕ್ರಿಯೆ ಸಂಹಿತೆ 1974.
2. ಭಾರತ ಸಾಕ್ಷ್ಯ ಅಧಿನಿಯಮ 1963.
3. ಕರ್ನಾಟಕ ಪೋಲೀಸ್ ಅಧಿನಿಯಮ 1963.
4. ಜೀತದಾಳು ಪದ್ದತಿ ( ನಿರ್ಮೂಲನಾ ) ಅಧಿನಿಯಮ 1976
5. ಬಾರತೀಯ ಮುದ್ರಾಂಕ ಅಧಿನಿಯಮ 1899
6. ಪ್ರಾಣಿಗಳಿಗೆ ಹಿಂಸೆ ಅಧಿನಿಯಮ 1960
7. ಕರ್ನಾಟಕ ಭಿಕ್ಷಾಟನಾ ಅಧಿನಿಯಮ 1975
8. ಸಾರ್ವಜನಿಕ ಆರೋಗ್ಯ ಅಧಿನಿಯಮ 1944.
9. ಕರ್ನಾಟಕ ಮಾರಾಟ ಕರ ಅಧೀನಿಯಮ 1957.
10. ಸತಿ ಹೋಗುವ ( ನಿಷೇಧ) ಅಧಿನಿಯಮ 1987
11. ಪ.ಜಾತಿ/ ಪ.ವರ್ಗಗಳ ( ದೌರ್ಜನ್ಯ ನಿಷೇಧ) ಅಧಿನಿಯಮ 1989.
12. ಕರ್ನಾಟಕ ಆಹಾರ ಮತತು ನಾಗರೀಕ ಪೂರೈಕೆ ಅಧಿನಿಯಮ
13. ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನಗಳ ಜೀರ್ಣೋದ್ಧಾರ.

**2. ತಾಲ್ಲೂಕು ಕಛೇರಿಯ ಮೇಲ್ವಿಚಾರಣೆ ಮತ್ತು ಹೊಣೆಗಾರಿಕೆಯ ಮಾರ್ಗಗಳು ಸೇರಿದಂತೆ ತೀರ್ಮಾನ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕಾರ್ಯವಿಧಾನ :-**

**ತಾಲ್ಲೂಕು ಕಛೇರಿಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಯ ಅಧಿಕಾರ ಮತ್ತು ಕರ್ತವ್ಯಗಳ ಬಗ್ಗೆ ನಂ ಸಿಬ್ಬಂದಿ(1)ಸಿಆರ್/06/2017-18 ದಿನಾಂಕ : 29-07-2017 ರಂತೆ ಅಧಿಕೃತ ಜ್ಞಾಪನಗಳಲ್ಲಿ ಕಾರ್ಯನಿರ್ವಹಣಾ ಜಾರಿಗೊಳಿಸಿದೆ. ಅಂತೆಯೇ ಸಿಬ್ಬಂದಿ ವರ್ಗದವರು ಕಾರ್ಯ ನಿರ್ವಹಿಸುತ್ತಿದ್ದಾರೆ.**

**ಮೇಲೆ ತಿಳಿಸಿರುವ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ( ಗ್ರೂಪ್ ಸಿ ಮತ್ತು ಡಿ) ತಹಸೀಲ್ದಾರ್ ರವರ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಈ ಕಛೇರಿಯಲ್ಲಿ ನಿರ್ವಹಿಸುವ ಎಲ್ಲಾ ಸಂಬಂಧಿಸಿದಂತೆ ಶಾಖೆಗಳ ವಿಷಯಗಳಲ್ಲಿ ಅಂತಿಮ ತೀರ್ಮಾನ ಕೈಗೊಳ್ಳುವ ಅಧಿಕಾರಿ, ತಹಸೀಲ್ದಾರ್ ಆಗಿರುತ್ತಾರೆ.**

1. ಕಾಗದ ಪತ್ರಗಳ ಸ್ವೀಕೃತಿ ವಿಲೇವಾರಿ :-

   ಸಾರ್ವಜನಿಕರಿಂದ ಅಧೀನ ಕಛೇರಿಗಳಿಂದ ಮತ್ತು ಸರ್ಕಾರ ಹಾಗೂ ಮೇಲಾಧಿಕಾರಿಗಳಿಂಧ ಬರುವಂತಹ ಎಲ್ಲಾ ಕಾಗದ ಪತ್ರಗಳನ್ನು/ ಕಡತಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ಸ್ವೀಕರಿಸಿ, ಸಾರ್ವಜನಿಕರ ಮನವಿ ಬಗ್ಗೆ ಸ್ಥಳದಲ್ಲೇ ಸ್ವೀಕೃತಿ ಪತ್ರವನ್ನು ನೀಡಿದ ನಂತರ ಶಿರಸ್ತೇದಾರರ ಮುಖಾಂತರ ತಹಸೀಲ್ದಾರ್ ರವರ ಗಮನಕ್ಕೆ ತಂದು ಸ್ವೀಕೃತಿ ಶಾಖೆಯಲ್ಲಿ ದಾಖಲಿಸಿ ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ ಪ್ರತಿ ಕಡತ/ ಕಾಗದ ಪತ್ರಗಳನ್ನು ಶಾಖೆವಾರು ಗುರುತಿಸಿಕೊಡುವಂತೆ ಹಾಕಿದ ನಂತರ ಅಗತ್ಯ ಕ್ರಮ ಕೈಗೊಳ್ಳಲು ನೀಡಲಾಗುತ್ತದೆ. ಉದಾಹರಣೆಗೆ,

   1. ಭೂ ಮಂಜೂರಾತಿ (ಎಲ್.ಎನ್.ಡಿ)
   2. ಭೂ ಸುಧಾರಣೆ (ಎಲ್.ಆರ್.ಎಫ್)
   3. ಭೂ ಸ್ವಾಧೀನ (ಎಲ್.ಎ.ಕ್ಯೂ)
   4. ಲೆಕ್ಕ ಶಾಖೆ (ಎ.ಸಿ.ಟಿ)
   5. ಹಕ್ಕು ದಾಖಲೆ (ಆರ್.ಆರ್.ಟಿ)
   6. ಸಿಬ್ಬಂದಿ ಶಾಖೆ(ಇ.ಎಸ್.ಟಿ)
   7. ಅಭಿಲೇಖಾಲಯ (ಆರ್.ಕೆ)
   8. ಭೂ ಪರಿವರ್ತನೆ(ಎ.ಎಲ್.ಎನ್)
   9. ಸ್ವಾತಂತ್ರ್ಯ ಹೋರಾಟಗಾರರ ಗೌರವಧನ (ಎಫ್. ಎಫ್.ಸಿ)
   10. ಚುನಾವಣೆ(ಎ.ಎಲ್.ಎನ್)
   11. ಆಡಳಿತ (ಎ.ಡಿ.ಎಂ)
   12. ಮೆಜೆಸ್ಟೀರಿಯಲ್ ಶಾಖೆ(ಎಂ.ಎ.ಜಿ)
   13. ಕರ್ನಾಟಕ ಪ.ಜಾತಿ/ ವರ್ಗಳ ಪರಭಾರೆ ನಿಷೇಧ(ಪಿ.ಟಿ.ಸಿ.ಎಲ್)

ಮಾಹಿತಿ ಹಕ್ಕು ಅಧಿನಿಯಮ - 2005

14. ಕರ್ನಾಟಕ ಗ್ರಾಮ ರದ್ಧಿಯಾತಿ ಕಾಯ್ದೆ(ಹೆಚ್.ಒ.ಎ)
15. ನೀರಾವರಿ(ಐ.ಆರ್.ಆರ್)
16. ಅರಣ್ಯ ( ಎಫ್.ಒ.ಆರ್)
17. ಕೊಳಚೆ ಪ್ರದೇಶ (ಕೆ.ಎ.ಎಸ್)
18. ಸಾಲ್ವೆನ್ಸಿ( ಎಸ್.ಒ.ಎಲ್)
19. ಸೋಲೇಷಿಯಂ ಫಂಡ್( ಎಸ್. ಎಫ್. ಎಸ್)
20. ವಿಧಾನ ಸಭಾ/ ಪರಿಷತ್ ಸದಸ್ಯರ ನಿಧಿ( ಕೆ.ಎಲ್.ಎ.ಡಿ)
21. ಲೋಕ ಸಭಾ ಸದಸ್ಯರ ನಿಧಿ( ಎಂ.ಪಿ.ಎಲ್.ಎ.ಡಿ)
22. ಮಿಸಲೇನಿಯಸ್ (ಎಂ.ಎಸ್.ಸಿ)
23. ಸಾರ್ವಜನಿಕ ಕುಂದು ಕೊರತೆ(ಸಿ.ಎಂ.ಸಿ)
24. ಪ್ರಕೃತಿ ವಿಕೋಪ (ಸಿ.ಎ.ಎಲ್)
25. ಜನಗಣತಿ ಜಾನುವಾರು ಗಣತಿ( ಸಿಇಎನ್)
26. ಇನಾಂ ರದ್ಧಿಯಾತಿ ತಸ್ತೀಕು (ಐಎನ್ಎ)
27. ಪಿಂಚಣಿ (ಪಿಇಎನ್)

4. **ಕಛೇರಿ ಪ್ರಕಾರ್ಯಗಳ ನಿರ್ವಹಣೆಗೆ ರೂಪಿಸಿರುವ ಸೂತ್ರಗಳು :–**

1. ತಾಲ್ಲೂಕು ಕಛೇರಿಯಲ್ಲಿ ಸ್ವೀಕರಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಸಾಮಾನ್ಯ ಸ್ವೀಕೃತಿ ಶಾಖೆಯಲ್ಲಿ ದಾಖಲಿಸಿ ವಿಷಯ ನಿರ್ವಾಹಕರಿಗೆ ನೀಡುವಂತಹ ವ್ಯವಸ್ಥೆ ಕಲ್ಪಿಸಲಾಗಿದೆ.
2. ಸಾರ್ವಜನಿಕರಿಂದ ಸ್ವೀಕರಿಸಲಾಗುವ ಕಾಗದ ಪತ್ರಗಳಿಗೆ ಸ್ವೀಕೃತಿ ನೀಡುವುದಲ್ಲದೆ ಕಾರ್ಯಗತ ಅವಧಿ ನಿಗದಿಪಡಿಸಿ ತಿಳಿಸಲಾಗುತ್ತದೆ.
3. ಸಾರ್ವಜನಿಕ ಕುಂದು ಕೊರತೆಗಳ ನಿವಾರಣೆ ಬಗ್ಗೆ ಸ್ವೀಕರಿಸಲಾಗುವ ಎಲ್ಲಾ ಮನವಿಗಳನ್ನು ಪ್ರತ್ಯೇಕ ರಿಜಿಸ್ಟರ್ ನಲ್ಲಿ ನಮೂದಿಸಿ, ಕ್ಲಿಪ್ತ ಕಾಲದಲ್ಲಿ ಉತ್ತರ ನೀಡುವುದು.

ಅಧೀನ ಕಛೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು. ಇಲಾಖೆಯ ಪ್ರಕಾರ್ಯಗಳ ಪ್ರಗತಿ ಪರಿಶೀಲಿಸಲು ಪ್ರತಿ ಮಾಹೆಯಲ್ಲಿ ರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರ ಸಭೆ ನಡೆಸಲಾಗುವುದು.

ಕಛೇರಿ ಕೈಪಿಡಿ ನಿಯಾಮಾವಳಿ ರೀತ್ಯಾ ಕಾಗದ ಪತ್ರಗಳನ್ನು ವಿಷಯ ನಿರ್ವಾಹಕರು ಸ್ವೀಕರಿಸಿ, ಗರಿಷ್ಠ 5 ದಿವಸದೊಳಗಾಗಿ ವಿಷಯ ನಿರ್ವಾಹಕರು ಎಲ್ಲಾ ಸ್ವೀಕರಿಸುವ ಕಾಗದ ಪತ್ರಗಳನ್ನು ವಿಷಯ ನಿರ್ವಾಹಕರ ದಿನಚರಿಯಲ್ಲಿ ನಮೂದಿಸಿಕೊಂಡು ತದನಂತರ ವಿಷಯ ವಹಿಯಲ್ಲಿ ಅನುಕ್ರಮವಾಗಿ ನೋಂದಾಯಿಸಿಕೊಂಡು ಕಡತಗಳಲ್ಲಿ ಟಿಪ್ಪಣಿ ಹಾಕಿ ಮಂಡಿಸಿರುತ್ತಾರೆ. ವಿಷಯ ನಿರ್ವಾಹಕರೆಲ್ಲರೂ ಕಛೇರಿ ಕಾರ್ಯವಿಧಾನದ ರೀತ್ಯಾ ಐದು ಕಟ್ಟು ವಿಧಾನ ಅಳವಡಿಸಿ ಕಾರ್ಯನಿರ್ವಹಿಸುತ್ತಾರೆ. ವಿಷಯ ನಿರ್ವಾಹಕರಿಂದ ಬಂದಂತಹ ಎಲ್ಲಾ ಕಡತಗಳ ಪರಿಶೀಲನೆ ಮಾಡಿ ಶಾಖಾ ಮುಖ್ಯಸ್ಥರಿಗೆ, ವಿಳಂಬವಾಗದ ರೀತಿ ಕಡತದಲ್ಲಿ ವಿಷಯವಾರು ತೀರ್ಮಾನ ಕೈಗೊಳ್ಳುವ ನಿಟ್ಟಿನಲ್ಲಿ ಸೂಕ್ತ ಅಭಿಪ್ರಾಯದೊಂದಿಗೆ ಸಲ್ಲಿಸುತ್ತಾರೆ. ಶಾಖಾ ಮುಖ್ಯಸ್ಥರು ಕಡತಗಳನ್ನು ಪರಿಶೀಲಿಸಿ ತಮ್ಮ ಅಭಿಪ್ರಾಯದೊಂದಿಗೆ ತಹಸೀಲ್ದಾರ್‌ರವರಿಗೆ ಕಡತಗಳನ್ನು ಸಲ್ಲಿಸುತ್ತಾರೆ. ತಹಸೀಲ್ದಾರ್‌ರವರು ಬರುವ ಕಡತಗಳನ್ನು ಪರಿಶೀಲಿಸಿ ನಿಯಾಮಾನುಸಾರ ಅದೇಶ ಹೊರಡಿಸುತ್ತಾರೆ. ಕಡತಗಳಲ್ಲಿ ತೀರ್ಮಾನ ಕೈಗೊಳ್ಳುವ ಬಗ್ಗೆ ಅನುಸರಿಸುವ ಕಾರ್ಯವಿಧಾನ ಕಛೇರಿ ಕೈಪಿಡಿಯ ನಿಯಾಮಾವಳಿ ರೀತ್ಯಾ ಕ್ರಮ ವಹಿಸಲಾಗುತ್ತದೆ.

4.**ತಾಲ್ಲೂಕು ಘಟಕ ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ಪಟ್ಟಿ.**

ತಾಲ್ಲೂಕು ಕಛೇರಿ ಘಟಕದಲ್ಲಿ ಮೇಲೆ ರೂಪಿಸಲಾದ ಕಾಯ್ದೆ ನಿಯಮಗಳಡಿ ನಿರ್ವಹಿಸುವ ಎಲ್ಲಾ ಕಡತಗಳಲ್ಲಿ ಅಂತಿಮ ಆದೇಶ ನೀಡಿ ಮುಕ್ತಾಯದ ನಂತರ ಪ್ರತಿ ಕಡತಗಳ ಪ್ರಾಮುಖ್ಯತೆಯನ್ನನುಸರಿಸಿ, ಪ್ರವರ್ಗ 'ಎ', 'ಬಿ', 'ಸಿ','ಡಿ'.'ಇ' ಎಂದು ವರ್ಗೀಕರಿಸಿ ನಿರ್ವಹಿಸಲಾಗುತ್ತದೆ. ಪ್ರತಿ ವರ್ಗೀಕರಣದ ಅವಧಿ ಕೆಳಕಂಡಂತಿರುತ್ತದೆ.

| | |
|---|---|
| 'ಎ' ಡಿಸ್ | ಶಾಶ್ವತ |
| 'ಬಿ' ಡಿಸ್ | 30 ವರ್ಷಗಳು |
| 'ಸಿ' ಡಿಸ್ | 10 ವರ್ಷಗಳು |
| 'ಡಿ' ಡಿಸ್ | 5 ವರ್ಷಗಳು |
| 'ಇ' ಡಿಸ್ | 1 ವರ್ಷ |

ಮಾಹಿತಿ ಹಕ್ಕು ಅಧಿನಿಯಮ – 2005

**5. ಅದರ ಕಾರ್ಯ ನೀತಿಯ ರಚನೆ ಅಥವಾ ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯವಿರುವಂತೆ ಮಾಡಲು ಇರುವಂಥ ವ್ಯವಸ್ಥೆಯ ವಿವರಗಳು.**

1. ಅಧೀನ ಕಚೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು.
2. ಇಲಾಖೆಯ ಪ್ರಕಾರ್ಯಗಳ ಪ್ರಗತಿ ಪರಿಶೀಲಿಸಲು ಸಭೆಗಳನ್ನು ಏರ್ಪಡಿಸುವುದು.
3. ಸಾರ್ವಜನಿಕ ಕುಂದು ಕೊರತೆ ಆಲಿಸುವುದು.
4. ಪಾರದರ್ಶಕ ಕಾಯಿದೆ ಅನುಷ್ಠಾನ
5. ಇತರ ಎಲ್ಲಾ ವರ್ಗದ ಜನರಿಂದ ಸ್ವೀಕರಿಸುವಂತಹ ಅಹವಾಲುಗಳು
6. ಪ್ರಾಕೃತಿಕ ವಿಕೋಪ
7. ಕರ್ನಾಟಕ ಭೂ ಕಂದಾಯ ಕಾಯ್ದೆ ಕಲಂ 94 ಸಿ ರಡಿ ಸ್ವೀಕರಿಸುವ ಅರ್ಜಿಗಳ ವಿಲೇವಾರಿ
8. ನಗರ ಸ್ಥಳೀಯ ಸಂಸ್ಥೆಗಳ ವಿಚಾರ ಇತ್ಯಾದಿ.

**6. ತಾಲ್ಲೂಕು ಘಟಕದ ಭಾಗವಾಗಿ ಅಥವಾ ಅದರ ಸಲಹೆಯ ಉದ್ದೇಶಕ್ಕಾಗಿ ರಚಿತವಾದ ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳನ್ನೊಳಗೊಂಡ ಮಂಡಳಿಗಳು, ಪರಿಷತ್ತುಗಳು, ಸಮಿತಿಗಳು, ಅಥವಾ ಇತರ ನಿಕಾಯಗಳ ಮತ್ತು ಆಡಳಿತಗಳ, ಪರಿಷತ್ತುಗಳ ಸಮಿತಿಗಳ ಮತ್ತು ಇತರೆ ನಿಕಾಯಗಳ ಸಭೆಗಳು ಸಾರ್ವಜನಿಕರಿಗೆ ಮುಕ್ತವಾಗುತ್ತವೆಯೇ ಅಥವಾ ಅಂತಹ ಸಭೆಗಳ ನಡಾವಳಿಗಳು ಸಾರ್ವಜನಿಕರಿಗೆ ದೊರೆಯುತ್ತವೆಯೇ ಎಂಬುದರ ವಿವರ ಪಟ್ಟಿಗಳು :–**

**1. ಅಧೀನ ಕಛೇರಿಗಳಿಂದ ವರದಿ ಪಡೆಯಲು ಕಾಲಾವಧಿ ನಿಗದಿಪಡಿಸುವುದು.:–**

ತಾಲ್ಲೂಕು ಕಛೇರಿಯಿಂದ ಅಧೀನ ಕಛೇರಿಗಳಿಗೆ ವರದಿ ಪಡೆಯಲು ಸಂದರ್ಭಾನುಸಾರ ಕಾಲ ಮಿತಿಯನ್ನು ನಿಗದಿಪಡಿಸಲಾಗುತ್ತದೆ. ಹಾಗೂ ವರದಿ ಪಡೆದು ಸಾರ್ವಜನಿಕರಿಗೆ/ ಸಂಘಟನೆಗಳ ಮುಖ್ಯಸ್ಥರುಗಳಿಗೆ ಸಭೆ ಕರೆದು ವರದಿಯಲ್ಲಿನ ಅಂಶಗಳ ಬಗ್ಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುತ್ತದೆ.

**2. ಇಲಾಖೆಯ ಪ್ರಕಾರ್ಯಗಳ ಪ್ರಗತಿ ಪರಿಶೀಲಿಸಲು ಸಭೆಗಳನ್ನು ಏರ್ಪಡಿಸುವುದು :–**

ಇಲಾಖೆಗೆ ಸಂಬಂಧಿಸಿದ ವಿಚಾರಗಳ ಬಗ್ಗೆ ಪ್ರಗತಿ ಸಾಧಿಸಲು ಕಾಲಕಾಲಕ್ಕೆ ಸಭೆಗಳನ್ನು ಕರೆಯಲಾಗುತ್ತದೆ. ಹಿಂದಿನ ಸಭೆಯ ಪ್ರಗತಿಯನ್ನು ಪರಿಶೀಲಿಸುವುದಲ್ಲದೇ ನಿಗದಿತ ಗುರಿ ಸಾಧಿಸುವುದರ ಬಗ್ಗೆ ಉಂಟಾಗಿರುವ ತೊಡಕುಗಳ ಬಗ್ಗೆ ಚರ್ಚಿಸಿ ಅಗತ್ಯವಾದ ನೆರವನ್ನು ಮತ್ತು ಸಲಹೆಗಳನ್ನು ನೀಡಲಾಗುತ್ತದೆ, ಹಾಗೂ ಮುಂದಿನ ಸಭೆಯ ದಿನಾಂಕವನ್ನು ನಿಗದಿ ಪಡಿಸಿ ಮುಂದಿನ ಸಭೆಯ ದಿನಾಂಕದೊಳಗೆ ಪ್ರಗತಿಯ ಮಾಹಿತಿಯನ್ನು ಸಲ್ಲಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಲಾಗುತ್ತಿದೆ.

**3. ಸಾರ್ವಜನಿಕ ಕುಂದು ಕೊರತೆ ಆಲಿಸುವ ದಿನ:–**

ಪ್ರತಿ ಮಾಹೆಯ ಒಂದನೇ ಶನಿವಾರ ಹೋಬಳಿ/ ಪಂಚಾಯಿತಿ ಮಟ್ಟದಲ್ಲಿ ಸಾರ್ವಜನಿಕರ ಕುಂದು ಕೊರತೆ ಆಲಿಸಲು ಸಾರ್ವಜನಿಕರಿಗೆ ಮುಕ್ತ ಪ್ರವೇಶ ಕಲ್ಪಿಸಲಾಗಿದೆ. ( ಜನಸ್ಪಂದನ ಕಾರ್ಯಾಕ್ರಮ). ಸದರಿ ದಿನದಂದು ಎಲ್ಲಾ ತಾಲ್ಲೂಕು ಮಟ್ಟದ ಇಲಾಖಾ ಅಧಿಕಾರಿಗಳು ಸಭೆಯಲ್ಲಿ ಹಾಜರಿರುತ್ತಾರೆ. ಸ್ಥಳದಲ್ಲಿಯೇ ಅರ್ಜಿದಾರರಿಂದ ಮನವಿ ಸ್ವೀಕರಿಸಿ, ನಿಯಮಾನುಸಾರ ಪರಿಶೀಲಿಸಿ ಶೇ 90% ರಷ್ಟು ಪರಿಹಾರವನ್ನು ಸ್ಥಳದಲ್ಲಿಯೇ ಕೈಗೊಳ್ಳಲಾಗುತ್ತದೆ. ಉಳಿದ ಪ್ರಕರಣಗಳಲ್ಲಿ ಕ್ರಮ ಜರುಗಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ಮುಂದಿನ ಸಭೆಯಲ್ಲಿ ತೆಗೆದುಕೊಂಡ ಕ್ರಮವನ್ನು ಅರ್ಜಿದಾರರಿಗೆ ತಿಳಿಸುವ ವ್ಯವಸ್ಥೆಯನ್ನು ನೀಡಲಾಗಿದೆ.

**4. ಎಲ್ಲಾ ವರ್ಗದ ಜನರಿಂದ ಸ್ವೀಕರಿಸುವಂತಹ ಅಹವಾಲುಗಳು :–**

ರೈತ ಸಂಘಟನೆಗಳು, ವಿದ್ಯಾರ್ಥಿಗಳ ಕುಂದು ಕೊರತೆಗಳಲ್ಲದೆ ಇನ್ನಿತರೆ ಸಂಘಟನೆಗಳಿಂದ ನಡೆಸುವ ಪ್ರತಿಭಟನೆಗಳ ಅಹವಾಲುಗಳನ್ನು ಸ್ವೀಕರಿಸಿ ಸಂಬಂಧಿಸಿದವರಿಗೆ ರವಾನಿಸಿ ಮಾಹಿತಿ ಪಡೆದು ಪರಿಹಾರ ಒದಗಿಸುವುದಲ್ಲದೇ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲಾಗುತ್ತಿದೆ.

ಮಾಹಿತಿ ಹಕ್ಕು ಅಧಿನಿಯಮ – 2005

**5. ಪ್ರಾಕೃತಿಕ ವಿಕೋಪ:–**

ನೈಸರ್ಗಿಕ ವಿಕೋಪಗಳಾದ ಅತಿವೃಷ್ಟಿ, ಅನಾವೃಷ್ಟಿ ಸೇರಿದಂತೆ ಎಲ್ಲಾ ವಿಕೋಪಗಳ ಬಗ್ಗೆ ನಿಯಾಮಾನುಸಾರ ಪರಿಹಾರ ನೀಡಲಾಗುತ್ತದೆ. ಅಲ್ಲದೇ ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಟ್ಟು ಸಹಾಯ ಪಡೆದು ತುರ್ತು ಸೇವಾ ಸೌಲಭ್ಯಗಳನ್ನು ನೀಡಾಗುತ್ತಿದೆ. ಅವಶ್ಯವಿದ್ದಲ್ಲಿ ಸಂಕಷ್ಟದ ಮಾಹಿತಿ ಪಡೆಯಲು ಹಾಗೂ ತುರ್ತು ಪರಿಹಾರ ನೀಡಲು ಅಗತ್ಯ ಸೇವಾ ಸೌಲಭ್ಯ ವ್ಯವಸ್ಥೆ ಮಾಡಲಾಗಿರುತ್ತದೆ. ( ತಹಸೀಲ್ದಾರವರವರ ಕಛೇರಿ ದೂರವಾಣಿ ಸಂಖ್ಯೆ : 08156 – 272564)

**6. ಕರ್ನಾಟಕ ಭೂ ಕಂದಾಯ ಕಾಯಿದೆ ಕಲಂ 94 ಸಿ ರಡಿ ಸ್ವೀಕರಿಸಿರುವ ಅರ್ಜಿಗಳ ವಿಲೇವಾರಿ :–**

ಸರ್ಕಾರಿ ಜಮೀನುಗಳಾದ ಸರ್ಕಾರಿ ಖರಾಬು ಮತ್ತು ಸರ್ಕಾರಿ ಗೋಮಾಳ ಎಂದು ವರ್ಗೀಕೃತಗೊಂಡ ಜಮೀನುಗಳಲ್ಲಿ ನಿರ್ಮಿಸಲಾದ ಅನಧಿಕೃತ ಮನೆಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಭೂ ಕಂದಾಯ ಕಾಯ್ದೆ 1964 94 (ಸಿ) ಪ್ರಕಾರ ಸರ್ಕಾರಿ ಜಮೀನಿನಲ್ಲಿ ದಿನಾಂಕ : 14–04–1998 ಕ್ಕಿಂತ ಮುಂಚಿತವಾಗಿ ಕಟ್ಟಿರುವ ಕಟ್ಟಡಗಳನ್ನು ಕರ್ನಾಟಕ ಸ್ವಾಧೀನದಲ್ಲಿರುವ ಭೂಮಿಯಲ್ಲಿ ವಾಸದ ನಿರ್ಮಾಣಕ್ಕೆ ಸಂಬಂಧಿಸಿದಂತೆ ಭೂ ಮಂಜೂರಾತಿ ನಿಯಮಗಳು 1999 ಪ್ರಕಾರ ಸರ್ಕಾರಿ ಭೂಮಿಯಲ್ಲಿ ನಿರ್ಮಿಸಿರುವ ಕಟ್ಟಡಗಳು/ ವಾಸದ ಮನೆಗಳನ್ನು ಸಕ್ರಮೀಕರಿಸಲಾಗುವುದು.) ಅರಣ್ಯ, ಕೆರೆ ಅಂಗಳ, ಸ್ಮಶಾನ ಹೊರತುಪಡಿಸಿ)

ನಗರ ಪ್ರದೇಶ ಹಾಗೂ ಗ್ರಾಮೀಣ ಪ್ರದೇಶದ 11,800–00 ರೂಗಳ ವಾರ್ಷಿಕ ಆದಾಯ ಮಿತಿಯೊಳಗಿರುವವರಿಗೆ ನಗರ ಪ್ರದೇಶದಲ್ಲಿ 30*40 ಅಡಿ ನಿವೇಶನಕ್ಕೆ ಚದರಡಿ 1 ಕ್ಕೆ ರೂ 1–00 ರಂತೆ 40*60 ಚದರಡಿ ನಿವೇಶನಕ್ಕೆ ರೂ. 1–90 ರಂತೆ 50*80 ಚದರಡಿ ನಿವೇಶನಕ್ಕೆ ರೂ. 2–80 ರಂತೆ ಹಾಗೂ 8–00 ಗುಂಟೆ ವಿಸ್ತೀರ್ಣವರೆಗೆ ರೂ. 3–00 ರಂತೆ ಸಕ್ರಮಗೊಳಿಸಲು ಅವಕಾಶವಿರುತ್ತದೆ. ಸಾರ್ವಜನಿಕ ಹಿತಾಸಕ್ತಿಗೆ ತೊಂದರೆ ಇಲ್ಲದೇ ಇರುವುದನ್ನು ಖಚಿತಪಡಿಸಿಕೊಂಡು, ಸದರಿ ಜಮೀನುಗಳನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿಟ್ಟಿರುವುದನ್ನು ಕಾನೂನು ಬದ್ದವಾಗಿ ವಿಹಿತಗೊಳಿಸಿ ನಂತರ ಸಕ್ರಮ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ.

ಮುನಿಸಿಪಲ್ ಕಾರ್ಪೋರೇಷನ್ ಪರಿಮಿತಿ ಮತ್ತು ಕಾರ್ಪೋರೇಷನ್ ಪರಿಮಿತಿಯಿಂದ 18 ಕಿ.ಮೀ. ದೂರದೊಳಗೆ ಇರುವ ಎಲ್ಲಾ ಸರ್ಕಾರಿ ಭೂಮಿಗಳ ಮತ್ತು ಅವರ ಅಧಿಕಾರ ವ್ಯಾಪ್ತಿಗೊಳಪಟ್ಟು ಇತರ ಸ್ಥಳಗಳಲ್ಲಿನ ಅಕ್ರಮ ವಾಸದ ಮನೆಗಳ ಸಕ್ರಮದ ಬಗ್ಗೆ ಮಂಜೂರಾತಿ ನೀಡುವ ಅಧಿಕಾರ ಜಿಲ್ಲಾಧಿಕಾರಿಗಳಿಗೆ ನೀಡಲಾಗಿರುತ್ತದೆ.

**7. ತಾಲ್ಲೂಕು ಘಟಕದ ಅಧಿಕಾರಿಗಳ ಮತ್ತು ನೌಕರರ ಮಾಹಿತಿ ಪುಸ್ತಕ ಮತ್ತು ವೇತನ ವಿವರ :–**

| ಕ್ರಮ ಸಂಖ್ಯೆ | ಅಧಿಕಾರಿ/ ನೌಕರರ ಪದನಾಮ | ಹುದ್ದೆಗಳ ಸಂಖ್ಯೆ | ವೇತನ ಶ್ರೇಣಿ |
|---|---|---|---|
| 1 | ತಹಸೀಲ್ದಾರ್ | 01 | 28,100–50,100 |
| 2 | ತಹಸೀಲ್ದಾರ್ ಗ್ರೇಡ್ 2 | 01 | 22,000–43,200 |
| 3 | ಉಪ ತಹಸೀಲ್ದಾರ್/ಶಿರಸ್ತೇದಾರ್ | 02 | 20,000–36,300 |
| 4 | ಪರ್ಯಾವೇಕ್ಷಕರು | 01 | 18,650–32,000 |
| 5 | ಕಂದಾಯ ನಿರೀಕ್ಷಕರು | 06 | 14,550–26,700 |
| 6 | ಆಹಾರ ನಿರೀಕ್ಷಕರು | 02 | 14,550–25,700 |
| 7 | ಪ್ರಥಮ ದರ್ಜೆ ಸಹಾಯಕರು | 07 | 14,550–25,700 |
| 8 | ದ್ವಿತೀಯ ದರ್ಜೆ ಸಹಾಯಕರು | 12 | 11,600–21,000 |
| 9 | ಬೆರಳಚ್ಚುಗಾರರು | 3 | 11,600–21,000 |
| 10 | ಗ್ರಾಮ ಲೆಕ್ಕಾಧಿಕಾರಿಗಳು | 43 | 11,600–21,000 |
| 11 | ಭೂ ಮಾಪಕರು | 01 | 12,500–24,000 |
| 12 | ವಾಹನ ಚಾಲಕರು | 01 | 11,600–21,000 |
| 13 | ಅಟೆಂಡರ್ | 01 | 10,400–16,400 |
| 14 | ದಫೇದಾರ್ | 01 | 10,400–16,400 |
| 15 | ದಫ್ತರ್ ಬಂದ್ | 01 | 10,400–16,400 |
| 16 | ಬಾಂದು ಜವಾನರು | | 9,600–14,550 |
| 17 | ಗ್ರೂಪ್ ಡಿ | 07 | 9,600–14,550 |

**8.** **ಅಧಿಕಾರಿಗಳ ಮತ್ತು ನೌಕರರ ನಿರ್ದೇಶಿಕೆ**

| ಕ್ರ.ಸಂ | ಹೆಸರು | ಹುದ್ದೆ | ಮೊಬೈಲ್ ನಂ | ದೂರವಾಣಿ ಸಂಖ್ಯೆ |
|---|---|---|---|---|
| 1 | ಕೆ.ನರಸಿಂಹಮೂರ್ತಿ | ತಹಸೀಲ್ದಾರ್ | 9986660803 | **08156–272564** |
| 2 | ಎನ್.ಎಂ.ಮುತ್ತುಗಪ್ಪ | ತಹಸೀಲ್ದಾರ್ ಗ್ರೇಡ್–2 | 9449095015 | |
| 3 | ಎನ್.ಕೆ.ಹೊನ್ನಪ್ಪ | ಚುನಾವಣಾ ಶಿರಸ್ತೇದಾರ್ | 9916525689 | |
| 4 | ಚಂದ್ರಪ್ಪ ಮರಾಠ | ಆರ್ಆರ್ ಶಿರಸ್ತೇದಾರ್ | 9880480600 | |
| 5 | ಹೆಚ್.ಎ.ಹರೀಶ್ | ಸಾಮಾಜಿಕ ಭದ್ರತಾ ಶಿರಸ್ತೇದಾರ್ | 9845795881 | |
| 6 | ಎಂ.ವಿ.ವೆಂಕಟರತ್ನಮ್ಮ | ಪ್ರ.ದ.ಸ | 9902655477 | |
| 7 | ಚಾಡರೆಡ್ಡಿ | ಪ್ರ.ದ.ಸ | 9482196060 | |
| 8 | ಕೆ.ಎಸ್.ನಂಜುಂಡರಾವ್ | ಪ್ರ.ದ.ಸ | 9880022577 | |
| 9 | ಟಿ.ನಂಜುಂಡಪ್ಪ | ಪ್ರ.ದ.ಸ | 9740801928 | |
| 10 | ಸುಬ್ಬಲಕ್ಷ್ಮಮ್ಮ | ಪ್ರ.ದ.ಸ | 9341425214 | |
| 11 | ಅಸಿಯಾಬಿ | ಪ್ರ.ದ.ಸ | 9141684426 | |
| 12 | ಖಾಲಿ | ಪ್ರ.ದ.ಸ | | |
| 13 | ಎಂ.ಪಿ.ಶಿವಣ್ಣ (ಶಿಷ್ಠಾಚಾರ ರಾ//ನಿ) | ಪ್ರ.ದ.ಸ | 9743358658 | |
| 14 | ಹೆಚ್.ಆರ್.ಸುಬ್ರಮಣ್ಯ (ಭೂಮಿ ರಾ//ನಿ) | ಪ್ರ.ದ.ಸ | 9141615799 | |
| 15 | ವಿ.ಕವಿತ | ದ್ವಿ.ದ.ಸ | 9845935178 | |
| 16 | ಜಿ.ಟಿ.ಶೋಭಾರಾಣಿ | ದ್ವಿ.ದ.ಸ | 9449763229 | |
| 17 | ಲಕ್ಷ್ಮೀಕಾಂತಮ್ಮ | ದ್ವಿ.ದ.ಸ | 9481586084 | |
| 18 | ನಾಜಿಯಾ ಖಾನಂ | ದ್ವಿ.ದ.ಸ | 9008080678 | |
| 19 | ಸಿ.ಜಿ.ಮಂಜುನಾಥ್ | ದ್ವಿ.ದ.ಸ | 9663974642 | |
| 20 | ಪಿ.ಹರೀಶ್ | ದ್ವಿ.ದ.ಸ | 7676642211 | |
| 21 | ಎಂನಾರಾಯಣರಾವ್ | ದ್ವಿ.ದ.ಸ | 9632142529 | |
| 22 | ದಿವ್ಯಾಬಾಯಿ.ಹೆಚ್.ಆರ್ | ಗ್ರಾ.ಲೆ | 9742058825 | |
| 23 | ವಿದ್ಯಾಶ್ರೀ | ಗ್ರಾ.ಲೆ. ಭೂಮಿ ಕೇಂದ್ರ | 9632498966 | |
| 24 | ದೀಪ.ಸಿ | ಗ್ರಾ.ಲೆ | 9611534797 | |
| 25 | ಪಿ.ಸುಧಾ | ಗ್ರಾ.ಲೆ | 9611705028 | |
| 26 | ಎಂ.ರಮೇಶ್ | ಗ್ರಾ.ಲೆ. ಭೂಮಿ ಕೇಂದ್ರ | 9844562194 | |
| 27 | ರತಿ.ಡಿ | ಗ್ರಾ.ಲೆ. ಭೂಮಿ ಕೇಂದ್ರ | 8123704052 | |
| 28 | ಅನಿಲ್ ಕಾಳಿ | ವಾಹನ ಚಾಲಕರು | 9663737993 | |
| 29 | ಸುರೇಶ್.ಆರ್ | ದಫೇದಾರ್ | | |
| 30 | ಡಿ.ಶಿವಕುಮಾರ್ | ಧಫ್ತರ್ ಬಂದ್ | 9972012064 | |
| 31 | ಎಂ.ವಿ.ಸುಬ್ಬರಾಯಪ್ಪ | ಡಿ.ಗ್ರೂಫ್ | 8022353872 | |
| 32 | ಮಕ್ಸೂದ್ ಪಾಷ | ಡಿ.ಗ್ರೂಪ್ | 9986706621 | |
| 33 | ಎಸ್.ನಂದಿನಿ | ಡಿ.ಗ್ರೂಪ್ | 9731950097 | |
| 34 | ಡಿ.ಲಕ್ಷ್ಮೀ | ಡಿ.ಗ್ರೂಪ್ | 9980045939 | |

ಮಾಹಿತಿ ಹಕ್ಕು ಅಧಿನಿಯಮ - 2005

## ಆಹಾರ ಶಾಖೆ

| ಕ್ರಮ ಸಂಖ್ಯೆ | ಹೆಸರು | ಹುದ್ದೆ | ಮೊಬೈಲ್ ನಂ | ದೂರವಾಣಿ ಸಂಖ್ಯೆ |
|---|---|---|---|---|
| 01 | ಸಿ.ಸೂರ್ಯನಾರಾಯಣ | ಆಹಾರ ಶಿರಸ್ತೇದಾರ್ (ಪ್ರಭಾರ) | 9845965678 | |
| 02 | ಸಿ.ಸೂರ್ಯನಾರಾಯಣ | ಆಹಾರ ನಿರೀಕ್ಷಕರು | 9845965678 | |
| 03 | ಗಿರೀಶ್.ಎಸ್ | ಆಹಾರ ನಿರೀಕ್ಷಕರು | | |
| 04 | ಕುಮಾರ್ ರಾಜ್ ಶ್ಯಾನುಭೋಗ್ | ದ್ವಿ.ದ.ಸ | 9686843859 | |

## ಕಸಬಾ ಹೋಬಳಿ

| ಕ್ರಮ ಸಂಖ್ಯೆ | ಹೆಸರು | ಹುದ್ದೆ | ವೃತ್ತ | ಮೊಬೈಲ್ ನಂ | ದೂರವಾಣಿ ಸಂಖ್ಯೆ |
|---|---|---|---|---|---|
| 1 | ಹನುಮೇಗೌಡ | ರಾಜಸ್ವ ನಿರೀಕ್ಷಕರು | ಕಸಬಾ | 9480386356 | – |
| 2 | ಕೆ.ವೆಂಕಟರವಣಪ್ಪ | ಗ್ರಾಮ ಲೆಕ್ಕಾಧಿಕಾರಿ | ಹಾರೋಬಂಡೆ | 9448905386 | – |
| 3 | ಸುಬ್ರಮಣ್ಯ.ಹೆಚ್.ಆರ್ | ಗ್ರಾಮ ಲೆಕ್ಕಾಧಿಕಾರಿ | ಗಂಗರೇಕಾಲುವೆ | 9141615799 | – |
| 4 | ತುಳಸಿರಾಮ್ | ಗ್ರಾಮ ಲೆಕ್ಕಾಧಿಕಾರಿ | ತಿಪ್ಪೇನಹಳ್ಳಿ | 9902441285 | – |
| 5 | ಅನಿಲ್ ಕುಮಾರ್.ಎ | ಗ್ರಾಮ ಲೆಕ್ಕಾಧಿಕಾರಿ | ಕಳವಾರ | 9448713412 | – |
| 6 | ಗಂಗಪ್ಪ | ಗ್ರಾಮ ಲೆಕ್ಕಾಧಿಕಾರಿ | ಯಾಲಗೆರೆ | 9663089534 | – |
| 7 | ಪರಶುರಾಮ್ ದಾವಣಗೆರೆ(ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ಮುಸ್ಟೂರು | 9902390972 | – |
| 8 | ಪರಶುರಾಮ್ ದಾವಣಗೆರೆ | ಗ್ರಾಮ ಲೆಕ್ಕಾಧಿಕಾರಿ | ಮರಳಕುಂಟೆ | 9902390972 | – |
| 9 | ಶಂಕರ ರೆಡ್ಡಿ | ಗ್ರಾಮ ಲೆಕ್ಕಾಧಿಕಾರಿ | ಪತ್ರೇನಹಳ್ಳಿ | 8861935548 | – |
| 10 | ವಿ.ಚಂದ್ರಶೇಖರ್ | ಗ್ರಾಮ ಲೆಕ್ಕಾಧಿಕಾರಿ | ಆವಲಗುರ್ಕಿ | 9916871195 | – |
| 11 | ಶಂಕರರೆಡ್ಡಿ (ಪ್ರಭಾರ) | ಗ್ರಾಮಲೆಕ್ಕಾಧಿಕಾರಿ | ಗುಂಡ್ಲಗುರ್ಕಿ | 8861935548 | – |
| 12 | ಪರಶುರಾಮ್ (ಪ್ರಭಾರ) | ಗ್ರಾಮಲೆಕ್ಕಾಧಿಕಾರಿ | ದಿಬ್ಬೂರು | 9902390972 | – |
| 13 | ಗಂಗಪ್ಪ (ಪ್ರಭಾರ) | ಗ್ರಾಮಲೆಕ್ಕಾಧಿಕಾರಿ | ಮಂಚನಬೆಲೆ | 9663089534 | – |
| 14 | ಕೃಷ್ಣ ಈಶ್ವರನಾಯಕ್ (ಪ್ರಭಾರ) | ಗ್ರಾಮಲೆಕ್ಕಾಧಿಕಾರಿ | ಚಿಕ್ಕಪ್ಯಾಯಲಗುರ್ಕಿ | 9880529372 | – |

## ನಂದಿ ಹೋಬಳಿ

| ಕ್ರಮ ಸಂಖ್ಯೆ | ಹೆಸರು | ಹುದ್ದೆ | ವೃತ್ತ | ಮೊಬೈಲ್ ನಂ | ದೂರವಾಣಿ ಸಂಖ್ಯೆ |
|---|---|---|---|---|---|
| 1 | ಜಿ.ಎ.ನಾರಾಯಣಸ್ವಾಮಿ | ಉಪತಹಸೀಲ್ದಾರ್ | ನಂದಿ | 8600150858 | – |
| 2 | ಬಿ.ಕುಮಾರ ಸ್ವಾಮಿ (ವಿ.ಶ್ರೀನಿವಾಸ್ ಪ್ರಭಾರ) | ರಾಜಸ್ವ ನಿರೀಕ್ಷಕರು | ನಂದಿ | 9845216719 | – |
| 3 | ಅನಿಲ್ ಕುಮಾರ್.ಎ | ಗ್ರಾಮ ಲೆಕ್ಕಾಧಿಕಾರಿ | ನಂದಿ | 9448713412 | – |
| 4 | ಅರುಣ್ ಕುಮಾರ್.ಎನ್ | ಗ್ರಾಮ ಲೆಕ್ಕಾಧಿಕಾರಿ | ಸುಲ್ತಾನ್ ಪೇಟೆ | 9741676718 | – |
| 5 | ವಿ.ಶ್ರೀನಿವಾಸ್ | ಗ್ರಾಮ ಲೆಕ್ಕಾಧಿಕಾರಿ | ಮೈಲಪ್ಪನಹಳ್ಳಿ | 9845216719 | – |
| 6 | ಶಿವನಂದಾ ಜಯಗೋಣ(ಪ್ರಭಾರೆ) | ಗ್ರಾಮ ಲೆಕ್ಕಾಧಿಕಾರಿ | ಮಧುರೇನಹಳ್ಳಿ | 9900555141 | – |
| 7 | ಹೇಮಚಂದ್ರನಾಯಕ್ (ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ಕುಡುವತಿ | 7353465136 | – |
| 8 | ರಾಜು | ಗ್ರಾಮ ಲೆಕ್ಕಾಧಿಕಾರಿ | ಬಾಲಕುಂಟಹಳ್ಳಿ | 9972152994 | – |

ಮಾಹಿತಿ ಹಕ್ಕು ಅಧಿನಿಯಮ - 2005

| | | | | | |
|---|---|---|---|---|---|
| 9 | ಪುನಿತ್ | ಗ್ರಾಮ ಲೆಕ್ಕಾಧಿಕಾರಿ | ಅಗಲಗುರ್ಕಿ | 8183874972 | – |
| 10 | ಎಂ.ಶಿವಾನಂದ ಜಯಗೋಣಿ | ಗ್ರಾಮ ಲೆಕ್ಕಾಧಿಕಾರಿ | ಬಳುವನಹಳ್ಳಿ | 9900555141 | – |
| 11 | ಎಂ.ಕಿರಣ್ ಕುಮಾರ್ (ಪ್ರಭಾರ ನಿಯೋಜನೆ) | ಗ್ರಾಮ ಲೆಕ್ಕಾಧಿಕಾರಿ | ಅಜ್ಜವಾರ | 9845503022 | – |
| 12 | ಎಂ.ಟಿ.ನರಸಿಂಹರಾಜು | ಗ್ರಾಮ ಲೆಕ್ಕಾಧಿಕಾರಿ | ಹೊಸಹುಡ್ಯ | 9964289228 | |
| 13 | ಆರ್.ಅನಿಲ್ ಕುಮಾರ್ | ಗ್ರಾಮ ಲೆಕ್ಕಾಧಿಕಾರಿ | ಜಾತವಾರಹೊಸಹಳ್ಳಿ | 9731719658 | |
| 14 | ಹೇಮಚಂದ್ರ ನಾಯಕ್ | ಗ್ರಾಮ ಲೆಕ್ಕಾಧಿಕಾರಿ | ನಾಯನಹಳ್ಳಿ | 7353465136 | |
| 15 | ಎಂ.ಎನ್.ಗೋವಿಂದಪ್ಪ | ಗ್ರಾಮ ಲೆಕ್ಕಾಧಿಕಾರಿ | ಕೊಂಡೇನಹಳ್ಳಿ | 8970237922 | |
| 16 | ವಿ.ಶ್ರೀನಿವಾಸ್ (ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ದೊಡ್ಡಮರಳಿ | 9845216719 | |
| 17 | ಅರುಣ್ ಕುಮಾರ್.ಎನ್ | ಗ್ರಾಮ ಲೆಕ್ಕಾಧಿಕಾರಿ | ಕುಪ್ಪಹಳ್ಳಿ | 9741676718 | |

## ಮಂಡಿಕಲ್ಲು ಹೋಬಳಿ

| ಕ್ರಮ ಸಂಖ್ಯೆ | ಹೆಸರು | ಹುದ್ದೆ | ವೃತ್ತ | ಮೊಬೈಲ್ ನಂ | ದೂರವಾಣಿ ಸಂಖ್ಯೆ |
|---|---|---|---|---|---|
| 1 | ವಿ.ಅಶೋಕ್ | ಉಪತಹಸೀಲ್ದಾರ್ | ಮಂಡಿಕಲ್ಲು | 8660659573 | – |
| 2 | ಸಂತೋಷ್.ಎಸ್ | ರಾಜಸ್ವ ನಿರೀಕ್ಷಕರು | ಮಂಡಿಕಲ್ಲು | 9740917499 | – |
| 3 | ಎಸ್.ಚೈತ್ರ | ಗ್ರಾಮ ಲೆಕ್ಕಾಧಿಕಾರಿ | ಮಂಡಿಕಲ್ಲು | | – |
| 4 | ಮಲ್ಲಿಕಾರ್ಜುನ ಶೆಟ್ಟಿ (ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ರಾಮಪಟ್ಟಣ | 7090367720 | – |
| 5 | ಎ.ಆರ್.ಮಂಜುನಾಥ್ | ಗ್ರಾಮ ಲೆಕ್ಕಾಧಿಕಾರಿ | ಆರೂರು | 9740131648 | – |
| 6 | ಹೇಮಚಂದ್ರ ನಾಯಕ್ (ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ಹಿರೇನಾಗವಲ್ಲಿ | 7353465136 | – |
| 7 | ಕೃಷ್ಣ ಈಶ್ವರನಾಯಕ್ | ಗ್ರಾಮ ಲೆಕ್ಕಾಧಿಕಾರಿ | ಅಡ್ಡಗಲ್ಲು | 9880529372 | – |
| 8 | ಕೃಷ್ಣ ಈಶ್ವರ್ ನಾಯಕ್ (ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ಚಿಕ್ಕಪ್ಯಾಯಲಗುರ್ಕಿ | 9880529372 | – |
| 9 | ಸಿ.ಪಿ.ವೆಂಕಟೇಶ್ (ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ಪರೇಸಂದ್ರ | 8951732172 | – |
| 10 | ಎಂ.ಟಿ.ನರಸಿಂಹರಾಜು (ಪ್ರಭಾರ) | ಗ್ರಾಮ ಲೆಕ್ಕಾಧಿಕಾರಿ | ಕೇತೇನಹಳ್ಳಿ | 9964289228 | – |

**9. ಎಲ್ಲಾ ಯೋಜನೆಗಳ ವಿವರಗಳನ್ನು ಸೂಚಿಸಿ, ಅದರ ಪ್ರತಿಯೊಂಧು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯವನ್ನು ಪ್ರಸ್ತಾವಿತ ಮತ್ತು ಮಾಡಲಾದ ಬಟವಾಡೆಗಳ ಕುರಿತ ವರದಿ ಈ ಕೆಳಕಂಡಂತಿದೆ.**

**ತಾಲ್ಲೂಕು ಕಛೇರಿಗೆ ಸಂಬಂಧಿಸಿದಂತೆ, 2017-18 ನೇ ಸಾಲಿನ ಆಯವ್ಯಯದ ಅಂದಾಜುಗಳು ಈ ಕೆಳಕಂಡಂತೆ ಇರುತ್ತದೆ.**

| ಕ್ರ.ಸಂ | ಲೆಕ್ಕ ಶೀರ್ಷಿಕೆ | ವೇತನ ಅಂದಾಜು | ಷರಾ |
|---|---|---|---|
| 1 | **2053-00-094-7-01**<br>**ತಾಲ್ಲೂಕು ಆಡಳಿತ** | **1,41,00,962-00** | |
| 2 | **2235-60-001-0-01**<br>**ಸಾಮಾಜಿಕ ಭದ್ರತೆ** | **11,24,757-00** | |
| 4 | **2506-00-101-1-01**<br>**ಭೂ ಸುದಾರಣೆ** | **4,02,240-00** | |
| 5 | **2011-02-010-0-09**<br>**ಶಾಸಕರ ಆಪ್ತ ಸಹಾಯಕರು** | **2,17,300-00** | |
| 6 | **2015-00-102-0-01**<br>**ಚುನಾವಣೆ** | **21,19,182-00** | |
| 7 | **2029-00-101-1-01**<br>ಗ್ರಾಮ ಲೆಕ್ಕಾಧಿಕಾರಿಗಳು | **1,41,03,405-00** | |
| 9 | **2029-00-101-1-01( 015)**<br>ಗ್ರಾಮ ಸಹಾಯಕರು | **45,60,000-00** | |

ಮಾಹಿತಿ ಹಕ್ಕು ಅಧಿನಿಯಮ - 2005

**10. ಎಲ್ಲಾ ಯೋಜನೆಗಳ ವಿವರಗಳನ್ನು ಸೂಚಿಸುವ ಪ್ರಸ್ತಾವಿತ ವೆಚ್ಚಗಳನ್ನು ಮತ್ತು ಮಾಡಲಾದ ಬಟವಾಡೆಗಳ ವರದಿಯನ್ನು ಸೂಚಿಸಿ ಅದರ ಪ್ರತಿಯೊಂದು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯ ವಿವರಗಳು.**

ಯೋಜನೆಗಳು ಈ ಇಲಾಖಾ ವ್ಯಾಪ್ತಿಗೊಳಪಡುವುದಿಲ್ಲ.

**11. ಹಂಚಿಕೆ ಮಾಡಲಾದ ಮೊಬಲಗಳನ್ನೊಳಗೊಂಡ ಸಹಾಯ ಧನ ಕಾರ್ಯಕ್ರಮಗಳ ಜಾರಿಯ ಮತದಾನ ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳು.**

ಅಂತಹ ಕಾರ್ಯಕ್ರಮಗಳು ಇಲಾಖಾ ವ್ಯಾಪ್ತಿಗೆ ಒಳಪಡುವುದಿಲ್ಲ.

**12. ನೀಡಿರುವ ರಿಯಾಯಿತಿಗಳು, ಅನುಮತಿ ಪತ್ರಗಳು ಅಥವಾ ಅಧಿಕಾರ ಪತ್ರಗಳನ್ನು ಪಡೆಯುವವರ ವಿವರಗಳು.**

ಇಂತಹ ವಿಷಯಗಳು ಈ ಇಲಾಖಾ ವ್ಯಾಪ್ತಿಗೆ ಬಂದಿರುವುದಿಲ್ಲ.

**13. ಲಭ್ಯವಿರುವ ಅಥವಾ ಹೊಂದಿರುವ ಮಾಹಿತಿಯ ವಿವರಗಳನ್ನು ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ ಬಗ್ಗೆ.**

ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ವಿಧಾನ ಚುನಾವಣೆಗಳ ಮತದಾರರ ಪಟ್ಟಿಯನ್ನು ಗಣಕೀಕರಣಗೊಳಿಸಲಾಗಿದೆ. ಈ ಕಛೇರಿಯ ಅಭಿಲೇಖಾಲಯದಲ್ಲಿರುವ ಕಡತಗಳನ್ನು ಗಣಕೀಕರಣಗೊಳಿಸಲಾಗಿದೆ.
ತಾಲ್ಲೂಕಿನ ಸಮಗ್ರ ಮಾಹಿತಿಯನ್ನು ಒಳಗೊಂಡ ವೆಬ್‌ಸೈಟ್ ಅನ್ನು ಸಾರ್ವಜನಿಕರ ಅನುಕೂಲಕ್ಕಾಗಿ ತಯಾರಿಸಲಾಗಿದೆ.
ವೆಬ್‌ಸೈಟ್ ವಿಳಾಸ –

**14. ಸಾರ್ವಜನಿಕರ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿದ್ದಲ್ಲಿ ಅದರ ಕೆಲಸದ ಸಮಯವನ್ನು ಒಳಗೊಂಡಂತೆ ಮಾಹಿತಿ ಪಡೆಯಲು ಸಾರ್ವಜನಿಕರಿಗೆ ಲಭ್ಯವಿರುವ ಸೌಲಭ್ಯಗಳ ವಿವರಗಳು.**

<u>ಗ್ರಂಥಾಲಯ ಹಾಗೂ ವಾಚನಾಲಯಗಳ ಸೌಲಭ್ಯವಿರುವುದಿಲ್ಲ.</u>

**15. ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಪದನಾಮಗಳು ಮತ್ತು ಇತರೆ ವಿವರಗಳು :–**

## <u>ಅಧಿಸೂಚನೆ</u>

**<u>ಭಾರತ ಸರ್ಕಾರದ ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ ಕಲಂ 4(1) (ಬಿ) ಅನುಸಾರ ಪ್ರಕಟಿಸಬೇಕಾದ ವಿವರಗಳು</u>**

ಮಾಹಿತಿ ಪಡೆಯುವ ಹಕ್ಕು ಅಧಿನಿಯಮ 2005 ರ (central act 22 of 2005) ಸೆಕ್ಷನ್ 5(1) 5(2) ಮತ್ತು 19 (1) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಂದಾಯ ಇಲಾಖೆಗೆ ಸೇರಿದ ತಹಸೀಲ್ದಾರ್ ರವರ ಕಛೇರಿಯ ಮಾಹಿತಿಯನ್ನು ಕೋರುವ ವ್ಯಕ್ತಿಗಳಿಗೆ ಅಂತಹ ಮಾಹಿತಿಯನ್ನು ಮೇಲಿನ ಕಾಯ್ದೆಯನ್ವಯ ಒದಗಿಸಲು, ಮಾಹಿತಿ ಕೋರುವ ಅರ್ಜಿಗಳು ಅಥವಾ ಮೇಲ್ಮನವಿಗಳನ್ನು ಸ್ವೀಕರಿಸಲು ಕ್ರಮವಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿ, ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಮೇಲ್ಮನವಿ ಪ್ರಾಧಿಕಾರಗಳನ್ನಾಗಿ ಈ ಕೆಳಕಂಡಂತೆ ಸರ್ಕಾರದಿಂದ ನೇಮಿಸಲಾಗಿದೆ.

ಮಾಹಿತಿ ಹಕ್ಕು ಅಧಿನಿಯಮ - 2005

| ಕ್ರಮ ಸಂಖ್ಯೆ | ಇಲಾಖೆಯ ಹೆಸರು | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005 ರ ಸೆಕ್ಷನ್ 5(1) ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005 ರ ಸೆಕ್ಷನ್ 5(2) ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ | ಮಾಹಿತಿ ಪಡೆಯುವ ಹಕ್ಕು ಕಾಯ್ದೆ 2005 ರ ಸೆಕ್ಷನ್ 19(1) ರ ಪ್ರಕಾರ ಮೇಲ್ಮನವಿ ಪ್ರಾಧಿಕಾರ |
|---|---|---|---|---|
| 1 | ತಹಸೀಲ್ದಾರ್ ಹಾಗೂ ತಾಲ್ಲೂಕು ದಂಡಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ. | ಕೆ.ನರಸಿಂಹಮೂರ್ತಿ ತಹಶೀಲ್ದಾರ್, ಹಾಗೂ ತಾಲ್ಲೂಕು ದಂಡಾಧಿಕಾರಿಗಳು, ಚಿಕ್ಕಬಳ್ಳಾಪುರ ತಾಲ್ಲುಕು. | ಶ್ರೀ.ಚಂದ್ರಪ್ಪ ಮರಾಠ ಶಿರಸ್ತೇದಾರರು, ಶ್ರೀ.ಹೆಚ್.ಎ.ಹರೀಶ್ ಸಾಮಾಜಿಕ ಭದ್ರತೆ ಶಿರಸ್ತೇದಾರರು. | ಶಿವಸ್ವಾಮಿ. ಕ.ಆ.ಸೇ. ಉಪವಿಭಾಗಾಧಿಕಾರಿಗಳು, ಚಿಕ್ಕಬಳ್ಳಾಪುರ ಉಪ ವಿಭಾಗ ಚಿಕ್ಕಬಳ್ಳಾಪುರ. |

**16. ನಿರ್ದಿಷ್ಟಪಡಿಸಬಹುದಾದಂತಹ ಇತರೆ ಮಾಹಿತಿಗಳು :–**

ಕಛೇರಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಪ್ರತ್ಯೇಕ ಶಾಖೆಯನ್ನು ತೆಗೆಯಲಾಗಿರುತ್ತದೆ. ಹಾಗೂ ಸೂಕ್ತ ಹಿಂಬರಹದ ಮೂಲಕ ಸಹ ಅರ್ಜಿದಾರರಿಗೆ ತಿಳಿಸಲಾಗುತ್ತದೆ.

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಆಡಳಿತ ನಿರ್ವಹಣೆ ನಿಟ್ಟಿನಲ್ಲಿ ತಾಲ್ಲೂಕು ವೆಬ್‌ಸೈಟ್ ಸೃಷ್ಟಿಸಲು ಮತ್ತು ಕಡತಗಳನ್ನು ಕಂಪ್ಯೂಟರ್ ಮೂಲಕವೇ ನಿರ್ವಹಿಸುವಂತಹ ಯೋಜನೆಯನ್ನು ಸರ್ಕಾರದಿಂದ ಅಂಗೀಕೃತ ಪಡೆದು ನಿರ್ವಹಿಸಲಾಗುವುದು ಹಾಗೂ ತಾಲ್ಲೂಕಿನ ಎಲ್ಲಾ ಇಲಾಖೆಗಳ ಮಾಹಿತಿಯನ್ನು ಅಳವಡಿಸಲಾಗಿದೆ.

**<u>ಶಿರಸ್ತೇದಾರರು</u> :–**

ತಾಲ್ಲೂಕು ಕಛೇರಿಯಲ್ಲಿ ಸಿಬ್ಬಂದಿ ಮತ್ತು ಲೆಕ್ಕ ಪತ್ರ/ ಚುನಾವಣೆ/ ಕಂದಾಯ/ ಕಾನೂನು/ ಶಿಷ್ಟಾಚಾರ/ ಸ್ವೀಕೃತಿ ಮತ್ತು ರವಾನೆ ಶಾಖೆಗಳಿಗೆ ಶಿರಸ್ತೇದಾರರು ಇರುತ್ತಾರೆ. ಅವರಿಗೆ ವಹಿಸಲಾದ ಶಾಖೆಯ ಮೇಲ್ವಿಚಾರಣೆ ಮಾಡುತ್ತಾರೆ. ಇವರುಗಳು ಕಛೇರಿಯ ಅಧಿಕಾರಿಗಳವರಿಗೆ ಅಧೀನ ಸಿಬ್ಬಂದಿಗಳಾಗಿ ಕಾರ್ಯನಿರ್ವಹಿಸುತ್ತಾರೆ.

**<u>ನೈಸರ್ಗಿಕ ವಿಕೋಪ</u> :–**

ಈ ಶಾಖೆಯಲ್ಲಿ ಪ್ರಾಕೃತಿಕವಾಗಿ ಬರ ಮತ್ತು ಅತಿವೃಷ್ಟಿ ಸಂಭವಿಸಿದಾಗ, ತುರ್ತು ರಕ್ಷಣಾತ್ಮಕ ಕ್ರಮಗಳನ್ನು ಜರುಗಿಸಲಾಗುವುದು. ಬರಗಾಲ ಉಂಟಾದಾಗ ಕಾಮಗಾರಿಗಳನ್ನು ತೆಗೆದುಕೊಂಡು ಕೃಷಿಕರು ಕೂಲಿಕಾರರಿಗೆ ಕೂಲಿ ಕೆಲದ ಲಭ್ಯವಾಗುವಂತೆ ಸಾರ್ವಜನಿಕ ಮೂಲ ಸೌಲಭ್ಯವಾದ ಕುಡಿಯುವ ನೀರಿನ ಪೂರೈಕೆಗಾಗಿ ಕ್ರಮ ಕೈಗೊಳ್ಳುವುದು. ಅತಿವೃಷ್ಟಿ ಆದಾಗ ತುರ್ತು ರಕ್ಷಣಾ ಕ್ರಮಗಳನ್ನು ಕೈಗೊಳ್ಳಲಾಗುವುದು. ನಷ್ಟ ಸಂಭವಿಸಿದವರಿಗೆ ಪರಿಹಾರ ಸೌಲಭ್ಯ ಒದಗಿಸುವುದು. ಆಕಸ್ಮಿಕ ಬೆಂಕಿ ಅಥವಾ ಭೂಕಂಪ ಮತ್ತು ಅಪಘಾತಗಳು ಹಾಗೂ ಸಿಡಿಲು ಬಡಿದು ಮೃತಪಟ್ಟಿರುವವರ ಕುಟುಂಬಗಳಿಗೆ ಪರಿಹಾರ ನೀಡಲಾಗುವುದು.

**<u>ಭೂ ಮಂಜೂರಾತಿ</u> :–**

ಈ ಶಾಖೆಯಲ್ಲಿ ಲಭ್ಯವಿರುವ ಸರ್ಕಾರಿ ಜಮೀನನ್ನು ಕೃಷಿಗೆ ಯೋಗ್ಯವಾದ ಜಮೀನನ್ನು ಗುರುತಿಸಿ, ಭೂ ರಹಿತರಿಗೆ ಹಂಚುವುದು ಹಾಗೂ ಇನ್ನಿತರೆ ಉದ್ದೇಶಗಳಿಗೆ ಭೂ ಮಂಜೂರಾತಿ ಮಾಡುವುದು. ನದಿ, ನಾಲಾಗಳ ರಕ್ಷಣೆ ಮಾಡುವುದು. ಸ್ಮಶಾನಗಳಿಗಾಗಿ/ ದನಗಳು ಮೇಯಲು ಗೋಮಾಳಕ್ಕಾಗಿ ಭೂಮಿ ಕಾಯ್ದಿರಿಸುವುದು. ಭೂ ಮಂಜೂರಾತಿ ಪ್ರಕರಣಗಳಲ್ಲಿ ಪ.ಜಾತಿ/ ಪ.ಪಂ ಗಳ ಜನರಿಗೆ ಮಂಜೂರಾದ ಜಮೀನುಗಳನ್ನು ನಿಯಮ ಉಲ್ಲಂಘನೆ ಮಾಡಿ ಮಾರಾಟ ಮಾಡಿರುವುದನ್ನು ರದ್ದು ಪಡಿಸುವುದು, ಸರ್ಕಾರಿ ಜಮೀನು ಅನಧಿಕೃತ ಅತಿಕ್ರಮಣ ಮಾಡಿರುವುದನ್ನು ಕ್ರಮ ಜರುಗಿಸಿ ತೆರವುಗೊಳಿಸಲಾಗುವುದು.

**<u>ಭೂ ಸ್ವಾಧೀನ</u> :–**

ಸಾರ್ವಜನಿಕ ಕಟ್ಟಡ, ನೀರಾವರಿ ಯೋಜನೆಗಳು, ಸೇತುವೆಗಳು, ವಿದ್ಯುತ್ ಪ್ರಸರಣ ನಿಗಮ ಮತ್ತು ವಸತಿ ಯೋಜನೆ ಇತ್ಯಾದಿ. ಸಾರ್ವಜನಿಕ ಉಪಯುಕ್ತತೆಗಳಿಗೆ ಪಟ್ಟಾ ಭೂಮಿಯನ್ನು ಭೂ ಸ್ವಾಧೀನ ಪಡಿಸಿಕೊಳ್ಳುವುದು ಸರಕಾರೇತರ ಪ್ರಾಧಿಕಾರಗಳು ಸಂಘ ಸಂಸ್ಥೆಗಳು ಇತರೆ ಯಾವುದೇ ಪ್ರಾಧಿಕಾರಗಳು ಭೂ ಸ್ವಾಧೀನವನ್ನು ಆಕ್ಷೇಪಿಸಿದಲ್ಲಿ ಭೂ ಕೋರಿಕೆ ಮೇರೆಗೆ ಭೂ ಸ್ವಾಧೀನಕ್ಕಾಗಿ ತಗಲುವ ಪೂರ್ಣ ಭೂ ಸ್ವಾಧೀನ ವೆಚ್ಚವನ್ನು ಭರಿಸಿಕೊಂಡು, ಭೂ ಸ್ವಾಧೀನ ಪಡಿಸಿಕೊಳ್ಳುವುದು ಮತ್ತು ಪರಿಹಾರ ಧನ ನೀಡುವುದು. ಅವಾರ್ಡ್ ಕರಡು ತೀರ್ಪನ್ನು ರೂ. 50–00 ಲಕ್ಷದವರೆಗೆ ಐತೀರ್ಪನ್ನು ಅನುಮೋದಿಸುವ ಅಧಿಕಾರ ಜಿಲ್ಲಾಧಿಕಾರಿಗಳಿಗೆ ಇರುತ್ತದೆ.

**<u>ಭೂ ಸುಧಾರಣೆ</u> :–**

ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961 ರಲ್ಲಿ ಅವಕಾಶವಿದ್ದಂತೆ ಕಲಂ 66 ರಡಿಯಲ್ಲಿ ಎಲ್ಲಾ ಭೂಮಾಲೀಕರಿಂದ  ಭೂ ಹಿಡುವಳಿಯ ಘೋಷಣೆ ಪಡೆಯುವುದು. ಕಲಂ 38 ರ ಡಿಯಲ್ಲಿ ವಸತಿ ನಿರ್ಮಾಣ ಮಾಡಿದ ಜಮೀನನ್ನು ಮಾಡುವುದು. ಕಲಂ 77 ರ ಅಡಿಯಲ್ಲಿ ಹೆಚ್ಚುವರಿ ಜಮೀನನ್ನು ಭೂ ರಹಿತರಿಗೆ ಮಂಜೂರಿ ಮಾಡುವ ಕೆಲಸ ಮೇಲ್ವಿಚಾರಣೆ 78 ರಡಿಯಲ್ಲಿ ಗೇಣಿ ಭೂಮಿಯನ್ನು ಮಂಜೂರಿ ಮಾಡುವುದು. ಮಾರಾಟ ಮಾಡಿದ ಕೃಷಿಯೇತರ ಕಾರ್ಯಗಳಿಗೆ ಉಪಯೋಗ ಮಾಡಿದ ಮತ್ತು ಹಿಡುವಳಿಯನ್ನು ಉಲ್ಲಂಘನೆ ಮಾಡಿ ಮಾರಾಟ ಮಾಡಿದ ಜಮೀನುಗಳನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳುವುದು. ಮಾಜಿ  ಭೂಮಾಲೀಕರಿಗೆ ಪರಿಹಾರ ಧನ ಮಂಜೂರಾತಿ, ಪ್ರಕ್ರಿಯೆ ಮೇಲ್ವಿಚಾರಣೆ, ಸಂಘ ಸಂಸ್ಥೆಗಳಿಗೆ ನಿರ್ವಹಣೆಗಾಗಿ ಬೇಕಾಗುವ ಜಮೀನನ್ನು ನಿರ್ವಹಿಸುವುದು.

ಕರ್ನಾಟಕ ಭೂ ಸುಧಾರಣೆ 1961 ಕಲಂ 109 ರಡಿ ಸಂಘ ಸಂಸ್ಥೆಗಳು ಜಮೀನು ಹೊಂದ ಬೇಕಾಗಿದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ:ಸಂವ್ಯಾಶಾಇ 47 ಶಾಸನ 2001 ದಿನಾಂಕ : 23–04–2003 ರಂತೆ ಅನುಮತಿ ಪಡೆಯಬೇಕಾಗಿರುತ್ತದೆ. 2 ಯೂನಿಟ್ ವರೆಗೆ ವಿದ್ಯಾಸಂಸ್ಥೆಗಳಿಗೆ, 10 ಯೂನಿಟ್ ವರೆಗೆ ಕೈಗಾರಿಕಾ ಪ್ರದೇಶಕ್ಕೆ ರಾಜ್ಯ, 4 ಯೂನಿಟ್ ವರೆಗೆ ಮಾನ್ಯತೆ ಪಡೆದ ಅಥವಾ ನೋಂದಾಯಿತ ಪೂಜಾ ಸ್ಥಳಕ್ಕೆ, ವ್ಯವಸಾಯೇತರ ಉದ್ದೇಶಕ್ಕೆ, ರಾಜ್ಯ ಸರ್ಕಾರದ ವಸತಿ ಯೋಜನೆಗಳಿಗೆ 10 ಯೂನಿಟ್ ವರೆಗೆ ಹಾಗೂ ಪುಷ್ಪಗಾರಿಕೆ, ತೋಟಗಾರಿಕೆ ಮತ್ತು ಆಗ್ರೋ ಇಂಡಸ್ಟ್ರೀಸ್‌ಗಳಿಗೆ 10 ಯೂನಿಟ್‌ಗಳವರೆಗೆ ಜಮೀನು ಖರೀದಿಸಲು ಅನುಮತಿಯನ್ನು ಜಿಲ್ಲಾಧಿಕಾರಿಗಳಿಂದ ಪಡೆಯಬೇಕಾಗಿರುತ್ತದೆ. ಮೇಲ್ಕಂಡ ಮಿತಿಗಿಂತ ಹೆಚ್ಚು ಜಮೀನು ಖರೀದಿಸಲು ಬರುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಒಪ್ಪಿಸಲಾಗುತ್ತದೆ. 2.00 ಲಕ್ಷ ವಾರ್ಷಿಕ ಆದಾಯದ ಮಿತಿಯುಳ್ಳವರಿಗೆ ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 80 ರಡಿ ವೈಯಕ್ತಿಕ ಜಮೀನು ಖರೀದಿಸಲು ಉಪವಿಭಾಗಾಧಿಕಾರಿಗಳಿಂದ ಅನುಮತಿ ಪಡೆಯಬೇಕಾಗಿರುತ್ತದೆ.

ಕಲಂ 79 ಎ ಮತ್ತು 79 ಬಿ ಉಲ್ಲಂಘಿಸಿದ ಜಮೀನುಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**<u>ಬೇಡಿಕೆ ವಸೂಲಿ ಬಾಕಿ (ಡಿ.ಸಿ.ಬಿ)</u> :–**

ಕೃಷಿ ಜಮೀನುಗಳ ಹಿಡುವಳಿಗಳಿಗೆ ಮೇಲೆ ನಿಗದಿಪಡಿಸಿದ ಕಂದಾಯ ನೀರಾವರಿ ಕರ ಮತ್ತು ಇತರೆ ಕಂದಾಯಗಳ ಬೇಡಿಕೆ ಪಟ್ಟಿ ತಯಾರಿಸುವುದು. ವಸೂಲಿ ಮತ್ತು ಬಾಕಿಗಳ ನಿರ್ವಹಣೆ ಕೈಗೊಳ್ಳುವುದು. ಸರ್ಕಾರದ ಇತರೆ ಇಲಾಖೆಗಳಿಂದ ವಸೂಲಿ ಮಾಡದೇ ಇರುವ ತೆರಿಗೆಗಳ ಬಾಕಿಗಳು ಮತ್ತು ಸಾಲಗಳನ್ನು, ಬಾಕಿ ಇರುವ ಮೊತ್ತವನ್ನು ಭೂ ಕಂದಾಯ ಬಾಕಿ ಎಂದು ಪರಿವರ್ತಿಸಿ ವಸೂಲಿ ಕ್ರಮ ಜರುಗಿಸುವುದು.

ಮಾಹಿತಿ ಹಕ್ಕು ಅಧಿನಿಯಮ – 2005

**ಗಣಿಗಾರಿಕೆ :–**

ಸರ್ಕಾರದ ಕೃಷಿಯೇತರ ಹಾಗೂ ಬೇರೆ ಜಮೀನುಗಳಲ್ಲಿ ನಡೆಯುವ ಗಣಿಗಾರಿಕೆಗೆ ಅನುಮತಿ ನೀಡುವ ಬಗ್ಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಅಭಿಪ್ರಾಯ ಸಲ್ಲಿಸುವುದು.

**ಜಮಾಬಂದಿ :–**

ಎಲ್ಲಾ ಕಂದಾಯ ಗ್ರಾಮಗಳ ಜಮೀನುಗಳಿಗೆ ಸಂಬಂಧಿಸಿದಂತೆ ವಾರ್ಷಿಕ ಕಂದಾಯ ನಿಗದಿ ವಸೂಲಾತಿ ಮತ್ತು ಬಾಕಿ ವಿವರಗಳನ್ನೊಳಗೊಂಡಂತೆ ಹಾಗೂ ಭೂ ಕಂದಾಯ ಮನ್ನಾ ಮಾಡಲಾಗಿರುವ ಮತ್ತು ಸರ್ಕಾರಿ ಜಮೀನುಗಳ ವಿವರಗಳನ್ನೊಳಗೊಂಡಂತೆ ವಾರ್ಷಿಕ ಜಮಾಬಂದಿ, ತಾಲ್ಲೂಕು ಜಮಾಬಂದಿ ಆಯಾಯ ತಹಸೀಲ್ದಾರ್‌ಗಳು ಮತ್ತು ಹುಜೂರ್ ಲೆಕ್ಕವನ್ನು ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಅವರಿಂದ ನಿಯೋಜಿಸಲ್ಪಟ್ಟ ಅಧಿಕಾರಿಗಳು ಜಮಾ ಬಂದಿ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ.

**ಕಾನೂನು ವಿಭಾಗ :–**

ತಾಲ್ಲೂಕು ವ್ಯಾಪ್ತಿಯಲ್ಲಿ ತಹಸೀಲ್ದಾರ್‌ರವರು ತಾಲ್ಲೂಕು ದಂಡಾಧಿಕಾರಿಗಳಾಗಿದ್ದು, ಇವರ ಕಾರ್ಯ ನಿರ್ವಹಣೆಗೆ ಮತ್ತು ಕಾನೂನು ಮತ್ತು ಸುವ್ಯವಸ್ಥೆ ಪಾಲನೆ ಮತ್ತು ಯಾರಾದರೂ ಗಣ್ಯ ವ್ಯಕ್ತಿಗಳು ಬಂದಲ್ಲಿ ಅವರಿಗೆ ಬಂದೋಬಸ್ತ್ ಅನುಕೂಲತೆ ನೀಡಿ ವಾಹನವನ್ನು ಒದಗಿಸುವುದು ಹಾಗೂ ಖಾಸಗಿ ಜನರಿಗೆ ಶಸ್ತ್ರಾಸ್ತ್ರ ಮಂಜೂರು ಮನರಂಜನೆ ಕಾರ್ಯಕ್ರಮಗಳು ಚಲನಚಿತ್ರಗಳಿಗೆ ನಾಟಕ ಇತರೆ ಸಾಂಸ್ಕೃತಿಕ ಚಟುವಟಿಕೆಗಳಿಗೆ ಅನುಮತಿ ನೀಡಲು ಮಾನ್ಯ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡುವುದು.

**ವಸತಿ ಯೋಜನೆ :–**

ಸರ್ಕಾರದ ವಸತಿ ಯೋಜನೆಗಳಾದ ಆಶ್ರಯ, ಅಂಬೇಡ್ಕರ್, ಇಂದಿರಾ ಆವಾಜ್ ಯೋಜನೆಯಡಿ ವಸತಿ ಹೀನರಿಗೆ ಮತ್ತು ಅವರಿಗೆ ವಸತಿ ನಿರ್ಮಾಣಗಳನ್ನು ಮಾಡುವುದು. ನಿವೇಶನಗಳಿಗಾಗಿ ಅರ್ಹವಿರುವ ಭೂಮಿಯನ್ನು ಭೂ ಸ್ವಾಧೀನ ಮೂಲಕವಾಗಲೀ ಹಾಗೂ ಮಂಜೂರಾತಿ ಮೂಲಕವಾಗಲೀ ಕ್ರಮ ಜರುಗಿಸಲಾಗಿರುತ್ತದೆ.

**ದೇವಸ್ಥಾನ/ ವಕ್ಫ್ :–**

ಧಾರ್ಮಿಕ ಮತ್ತು ದತ್ತಿ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ದೇವಸ್ಥಾನಗಳ ಕಾರ್ಯ ನಿರ್ವಹಣೆ ಮತ್ತು ಟ್ರಸ್ಟ್ ನೇಮಕಾತಿ ಮಾಡುವುದು. ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಜಾತ್ರೆ ಉತ್ಸವಗಳನ್ನು ನಡೆಸುವುದು ಆರಾಧನ ಸಾಮಾನ್ಯ ಯೋಜನೆ ಅಡಿಯಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರ ಸಂಬಂಧ ಅನುದಾನ ಮಂಜೂರು ಮಾಡುವುದು. ಅದಕ್ಕೆ ಹಣ ಬಳಕೆ ಪ್ರಮಾಣ ಪತ್ರಗಳನ್ನು ಪಡೆದು ಸರ್ಕಾರಕ್ಕೆ ಸಲ್ಲಿಸುವುದು ಹಾಗೂ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆ, ತಸ್ತೀಕ್ ಭತ್ಯೆ, ವರ್ಷಾಸನಗಳ ಮಂಜೂರಿ ಮಾಡಲಾಗುತ್ತದೆ.

**ಲೆಕ್ಕ ಪತ್ರ :–**

ತಾಲ್ಲೂಕು ಕಛೇರಿಯ ವಾರ್ಷಿಕ ಅಂದಾಜು ಮತ್ತು ಖರ್ಚುಗಳ ವ್ಯವಹಾರಗಳ ನಿರ್ವಹಣೆ ತಹಸೀಲ್ದಾರ್‌ರವರ ಕಾರ್ಯಾಲಯದ ಸಿಬ್ಬಂದಿ ವೇತನ, ಪ್ರವಾಸ ಭತ್ಯೆ, ಸಾದಿಲ್ವಾರು ವೆಚ್ಚ, ವಾಹನಗಳ ಇಂಧನ ಮತ್ತು ದುರಸ್ತಿ ವೆಚ್ಚ ಇತರೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗಾಗಿ ಖರ್ಚುಮಾಡುವ ಬಿಲ್ಲುಗಳ ತಯಾರಿಕೆ ಮತ್ತು ಬಟವಾಡೆ ಅವಧಿ ಮೀರಿದ ಬಿಲ್ಲುಗಳನ್ನು ಮೇಲು ಸಹಿಗಾಗಿ ಉಪವಿಭಾಗಾಧಿಕಾರಿಗಳಿಗೆ ಸಲ್ಲಿಸಲಾಗುವುದು.

ಮಾಹಿತಿ ಹಕ್ಕು ಅಧಿನಿಯಮ - 2005

**ಚುನಾವಣೆ :–**

ಕೇಂದ್ರ ಚುನಾವಣಾ ಆಯೋಗದಿಂದ ನಿಗದಿ ಪಡಿಸಿದ ಲೋಕಸಭೆ ಚುನವಣೆ ಮತ್ತು ವಿಧಾನಸಭೆ ಚುನಾವಣೆ ಹಾಗೂ ರಾಜ್ಯ ಸರ್ಕಾರದ ಸ್ಥಳೀಯ ಸಂಸ್ಥೆ ಚುನಾವಣೆಗಳಾದ ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯಿತಿಗಳು ಹಾಗೂ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಚುನಾವಣೆ ಕಾರ್ಯ ಕ್ರಮಗಳನ್ನು ರೂಪಿಸುವುದು. ಚುನಾವಣೆಗೆ ಸಂಬಂಧಿಸಿದ ವ್ಯವಹಾರಗಳ ಪರಿಶೀಲನೆ ಮತ್ತು ಮತದಾರರಿಗೆ ಮತದಾರರ ಗುರುತಿನ ಚೀಟಿ ನೀಡುವುದು ಹಾಗೂ ಮತದಾರರ ಪಟ್ಟಿಗಳ ನಿರ್ವಹಣೆ.

**ಸಭೆ ಮತ್ತು ರಾಷ್ಟ್ರೀಯ ಹಬ್ಬಗಳು :–**

ತಾಲ್ಲೂಕಿನಲ್ಲಿ ನಡೆಯುವ ಉತ್ಸವ, ರಾಷ್ಟ್ರೀಯ ಹಬ್ಬಗಳು, ತಾಲ್ಲೂಕು ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಜರುಗುವ ಸಭೆ ಸಮಾರಂಭಗಳನ್ನು ನಿರ್ವಹಣೆ ಮಾಡುವುದು, ಅಧಿಕಾರಿಗಳ ಮಾಸಿಕ ಸಭೆ ಇತರೆ ಶಿಷ್ಟಾಚಾರ ಸಭೆ ನಿರ್ವಹಣೆ.

**ಅಭಿಲೇಖಾಲಯ :–**

ಕಾರ್ಯಾಲಯದ ಪ್ರತಿಯೊಂದು ಶಾಖೆಯಿಂದ ನಿರ್ವಹಣೆಗಾಗಿ ಕಛೇರಿ ಸಹಕಾರದಿಂದ ಬೇರೆ ಬೇರೆ ಬಾಕಿಯ ವಿಲೇಗಳ ಬೇರೆ ಬೇರೆ ವರ್ಗಗಳ ಕಾಗದ ಪತ್ರಗಳ ವ್ಯವಹಾರವನ್ನು ಎಷ್ಟು ಕಾಲ ಕಾಯ್ದಿರಿಸಬೇಕೆಂಬುದನ್ನು ತಿಳಿದು ಈ ಕೆಳಕಾಣಿಸಿದ ಪ್ರಕಾರ ವಿಭಜನೆ ಮಾಡಲಾಗುವುದು. ಹಾಗೂ ಶ್ರೇಣಿವಾರು ಹೊಂದಿಸಿ ಇಡಲಾಗುವುದು.

| | |
|---|---|
| 'ಎ' ಡಿಸ್ | ಶಾಶ್ವತ |
| 'ಬಿ' ಡಿಸ್ | 30 ವರ್ಷಗಳು |
| 'ಸಿ' ಡಿಸ್ | 10 ವರ್ಷಗಳು |
| 'ಡಿ' ಡಿಸ್ | 5 ವರ್ಷಗಳು |
| 'ಇ' ಡಿಸ್ | 1 ವರ್ಷ |

ಮೇಲೆ ಕಾಣಿಸಿದ ವಿಲೇವಾರಿಗಳ ಅವಧಿ ಮುಗಿದ ನಂತರ ಕಛೇರಿಯ ಮುಖ್ಯಸ್ಥರ ಆದೇಶವನ್ನು ಪಡೆದು "ಎ" ಮತ್ತು "ಬಿ" ಡಿಸ್‌ಗಳಲ್ಲಿನ ಕಡತಗಳನ್ನು ಹೊರತು ಪಡಿಸಿ, ನಾಶಗೊಳಿಸಲಾಗುವುದು.

ಕಾರ್ಯಾಲಯದ ಪೀಠೋಪಕರಣ ಕಾರ್ಯನಿರ್ವಹಣೆ ಯಂತ್ರ ಸಾಮಾಗ್ರಿಗಳ ಖರೀದಿ ಮತ್ತು ದುರಸ್ತಿ ಕಾರ್ಯಾಲಯದ ವ್ಯವಹಾರಕ್ಕೆ ಅಗತ್ಯವಿರುವ ಲೇಖನ ಸಾಮಾಗ್ರಿ ಖರೀದಿ ಮತ್ತು ವಿತರಣೆ ಕಛೇರಿಯ ಸುವ್ಯವಸ್ಥೆ, ವಿದ್ಯುದೀಕರಣ ನಿರ್ವಹಣೆ, ವಿವಿಧ ಕಾಯ್ದೆ ಅಡಿ ಇರುವ ಎಲ್ಲಾ ಪುಸ್ತಕಗಳನ್ನು ಸುಸ್ಥಿತಿಯಲ್ಲಿಡುವುದು ಮತ್ತು ಸಂಬಂಧಪಟ್ಟ ವಿಷಯ ನಿರ್ವಾಹಕರು ಕಡತಬೇಕೆಂದು ಕೋರಿಕೆ ಚೀಟಿ ಸಲ್ಲಿಸಿದಾಗ ಸಂಬಂಧಪಟ್ಟ ಕಡತವನ್ನು ನೀಡುವುದು, ಅಲ್ಲದೇ ಸಾರ್ವಜನಿಕರು ಕೋರುವ ದಾಖಲೆಗಳನ್ನು ನಿಯಾಮಾನುಸಾರ ನೀಡಲಾಗಿರುತ್ತದೆ.

**ಸಾಮಾಜಿಕ ಭದ್ರತಾ ಯೋಜನೆ :–**

ಸಾಮಾಜಿಕ ಭದ್ರತಾ ಯೋಜನೆ ಅಡಿಯಲ್ಲಿ ಬರುವ ಫಲಾನುಭವಿಗಳಿಗೆ ಅನುದಾನ ಬಿಡುಗಡೆ, ಸ್ವಾತಂತ್ರ್ಯ ಯೋಧರಿಗೆ ಕೇಂದ್ರ ಮತ್ತು ರಾಜ್ಯ ಗೌರವಧನ ಮಂಜೂರಿ, ವೃದ್ಧಾಪ್ಯ ವೇತನ, ಅಂಗವಿಕಲ ವೇತನ, ವಿಧವಾ ವೇತನ ಮನಸ್ವಿನಿ ವೇತನ, ಮೈತ್ರಿ ವೇತನ ಹಾಗೂ ಬುದ್ದಿಮಾಂಧ್ಯ ವೇತನದಾರರಿಗೆ ಮಾಸಾಶನ ನಿರ್ವಹಣೆ ಮಾಡುತ್ತಿದ್ದು, ಸರ್ಕಾರಕ್ಕೆ ಸೂಕ್ತ ಪರಿಶೀಲನಾ ಪ್ರಸ್ತಾವನೆಗಳನ್ನು ಸಲ್ಲಿಸಿ, ಗೌರವಧನವನ್ನು ಜಾರಿಗೊಳಿಸುವಲ್ಲಿ ಕ್ರಮ ಜರುಗಿಸಲಾಗುತ್ತಿದೆ. ಹಾಗೂ ಜಾತಿ ಮತ್ತು ಆದಾಯ ದೃಢೀಕರಿಸಿ ಪತ್ರಗಳ ನಿರ್ವಹಣೆ ಮತ್ತು ವಿತರಣೆ ಮಾಡುವುದು.

**ಸ್ವೀಕೃತಿ :–**

ಕಾರ್ಯಾಲಯಕ್ಕೆ ಸ್ವೀಕೃತವಾಗುವ ಸರ್ಕಾರ ಅಧೀನ ಕಾರ್ಯಾಲಯದ ಮತ್ತು ಸಾರ್ವಜನಿಕರಿಂದ, ಲೋಕಸಭೆ/ ವಿಧಾನ ಪರಿಷತ್ ಹಾಗೂ ಸ್ಥಳೀಯ ಸಂಸ್ಥೆಯ ಸದಸ್ಯರುಗಳಿಂದ ಸ್ವೀಕೃತಿಯಾದ ಫ್ಯಾಕ್ಸ್ ತಂತಿ, ಸಂದೇಶ, ಸುತ್ತೋಲೆ, ಸಾಮಾನ್ಯ ಅರ್ಜಿಗಳನ್ನು ಸಾಮಾನ್ಯ ಪುಸ್ತಕದಲ್ಲಿ ಮತ್ತು ಇತರ ಪುಸ್ತಕಗಳಲ್ಲಿ ನೋಂದಣಿ ಮಾಡಿಕೊಂಡು ಆಯಾಯ ಶಾಖೆಯ ವಿಷಯ ನಿರ್ವಾಹಕರಿಗೆ ವಿತರಣೆಯನ್ನು ಮಾಡುವುದು.

ಮಾಹಿತಿ ಹಕ್ಕು ಅಧಿನಿಯಮ - 2005

<u>ರವಾನೆ</u> :-

ಈ ಕಾರ್ಯಾಲಯದಿಂದ ಬಿಡುಗಡೆ ಆಗುವ ವ್ಯವಹಾರಗಳ ಪತ್ರಗಳು, ಆದೇಶಗಳು, ಹಾಗೂ ನೋಟೀಸುಗಳನ್ನು ರವಾನೆ ಮಸ್ತಕದಲ್ಲಿ ನೋಂದಣಿ ಮಾಡಿಕೊಂಡು ಸಂಬಂಧಪಟ್ಟ ಕಛೇರಿ ಹಾಗೂ ಇತರರಿಗೆ ರವಾನೆ ಮಾಡುವುದು ಇವುಗಳಲ್ಲಿ ಕೆಲವು ಅಂಚೆ ಮೂಲಕ ಹಾಗೂ ಕೆಲವು ಸ್ಥಳೀಯವಾಗಿ ಜಾರಿ ಮಾಡುವ ಪತ್ರಗಳನ್ನು ಪ್ರತ್ಯೇಕ ವಹಿಯಲ್ಲಿ ನೋಂದಾಯಿಸಿ ರವಾನೆ ಮಾಡುವುದು ಹಾಗೂ ಅಂಚೆ ಚೀಟಿಗಳ ಲೆಕ್ಕವನ್ನು ಸಹ ಇಡಲಾಗುವುದು.

ತಹಸೀಲ್ದಾರ್
ಚಿಕ್ಕಬಳ್ಳಾಪುರ ತಾಲ್ಲೂಕು.

ಮಾಹಿತಿ ಹಕ್ಕು ಅಧಿನಿಯಮ – 2005